ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 98 | ರಾಯಚೂರು Raichur | 30-09-2026 | ಬುಧವಾರ Wednesday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com

ಸಂಪಾದಕರು : ಗುರುರಾಜ ಕೆ
Editor: Gururaja K 98863 85685




## ಅವರೇನು ಇಂಗ್ಲೆಂಡ್ ಪರ ಆಡುತ್ತಿದ್ದಾರೆಯೇ?: ವೆಸ್ಟ್ ಇಂಡೀಸ್ ವಿರುದ್ಧ ಅಜೇಯ 139 ರನ್ ಗಳಿಸಿದ ವಿರಾಟ್ ಕೊಹ್ಲಿ ಬಗ್ಗೆ ಆರ್ ಅಶ್ವಿನ್ ಮಾತು!

# ಕಿತ್ತೂರು ರಾಣಿ ಚನ್ನಮ್ಮ ಶಾಲೆ ಕಟ್ಟಡ ಕಾಮಗಾರಿ ಕಳಪೆ: ಆರೋಪ

**ವರದಿ: ಬಸಲಿಂಗಯ್ಯ ಹಿರೇಮಠ**

ಸಿಂಧನೂರು: ಸಿಂಧನೂರು ತಾಲ್ಲೂಕಿನ ಸಿ.ಎಸ್.ಎಫ್ ನಂ.1 ಕ್ಯಾಂಪ್ ಹಾಗೂ ತುರಕಟ್ಟಿ ಕ್ಯಾಂಪ್ (ಸೂರ್ಯರೆಡ್ಡಿ ಕ್ಯಾಂಪ್) ಮಧ್ಯಭಾಗದಲ್ಲಿ ನಿರ್ಮಾಣವಾಗುತ್ತಿರುವ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯ ಕಟ್ಟಡ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದೆ ಎಂಬ ಆರೋಪ ಕೇಳಿಬಂದಿದೆ.

ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ವಿದ್ಯಾರ್ಥಿಗಳ ಭವಿಷ್ಯ ಹಾಗೂ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಗುಣಮಟ್ಟದ ಕಾಮಗಾರಿ ಕೈಗೊಳ್ಳಬೇಕಾಗಿದೆ. ಆದರೆ ಕಾಮಗಾರಿಯಲ್ಲಿ ಬಳಸಲಾಗುತ್ತಿರುವ ನಿರ್ಮಾಣ ಸಾಮಗ್ರಿಗಳ ಗುಣಮಟ್ಟ, ಕಾಮಗಾರಿ ಕೈಗೊಳ್ಳುವ ವಿಧಾನ ಹಾಗೂ ನಿರ್ಮಾಣದ ವೇಳೆ ಅನುಸರಿಸಬೇಕಾದ ತಾಂತ್ರಿಕ ಮಾನದಂಡಗಳ ಬಗ್ಗೆ ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸರ್ಕಾರದ ಅನುದಾನದಲ್ಲಿ ನಿರ್ಮಾಣವಾಗುತ್ತಿರುವ ಶಾಲಾ ಕಟ್ಟಡಗಳು ಹಲವು ವರ್ಷಗಳ ಕಾಲ ವಿದ್ಯಾರ್ಥಿಗಳ ಬಳಕೆಗೆ ಬರುವಂತಿರಬೇಕು. ಆದರೆ ಕಾಮಗಾರಿ ಪೂರ್ಣಗೊಳ್ಳುವ ಮೊದಲೇ ಕಳಪೆ ಗುಣಮಟ್ಟದ ಕುರಿತು ಆರೋಪಗಳು ಕೇಳಿಬಂದಿರುವುದು ಸಾರ್ವಜನಿಕರಲ್ಲಿ ಆತಂಕಕ್ಕೆ ಕಾರಣವಾಗಿದೆ. ಕಟ್ಟಡ ನಿರ್ಮಾಣದಲ್ಲಿ ಗುಣಮಟ್ಟಕ್ಕೆ ಆದ್ಯತೆ ನೀಡದಿದ್ದರೆ ಮುಂದಿನ ದಿನಗಳಲ್ಲಿ ಕಟ್ಟಡದ ಬಾಳಿಕೆ ಹಾಗೂ ವಿದ್ಯಾರ್ಥಿಗಳ ಸುರಕ್ಷತೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಸ್ಥಳೀಯರು ಹೇಳುತ್ತಾರೆ.

ಕಾಮಗಾರಿ ಸ್ಥಳದಲ್ಲಿ ಬಳಸಲಾಗುತ್ತಿರುವ ಸಾಮಗ್ರಿಗಳ ಗುಣಮಟ್ಟವನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಪರಿಶೀಲಿಸಬೇಕು. ಕಟ್ಟಡ ನಿರ್ಮಾಣಕ್ಕೆ ನಿಗದಿಪಡಿಸಿರುವ ಅಂದಾಜು, ವಿನ್ಯಾಸ ಹಾಗೂ ತಾಂತ್ರಿಕ ಮಾನದಂಡಗಳಂತೆ




> ಗುತ್ತಿಗೆದಾರರು ಹಾಗೂ ಅಧಿಕಾರಿಗಳು ಯಾರ ಗಮನಕ್ಕೂ ತರದೆ ಮನಸೋ ಇಚ್ಛೆ ಕಾಮಗಾರಿ ನಡೆಸುತ್ತಿದ್ದಾರೆ. ಕಾಮಗಾರಿಯ ಪ್ರತಿಯೊಂದು ಹಂತದಲ್ಲಿಯೂ ಕಳಪೆ ಗುಣಮಟ್ಟ ಕಂಡುಬರುತ್ತಿದೆ.
> **-ಪ್ರಭು ರಾಥೋಡ್**, ಸ್ಥಳೀಯ ನಿವಾಸಿ

ಕಾಮಗಾರಿ ನಡೆಯುತ್ತಿದೆಯೇ ಎಂಬುದನ್ನು ಪರಿಶೀಲಿಸುವ ಅಗತ್ಯವಿದೆ. ಕಾಮಗಾರಿಯ ಪ್ರತಿ ಹಂತದಲ್ಲಿಯೂ ತಾಂತ್ರಿಕ ಅಧಿಕಾರಿಗಳಿಂದ ಗುಣಮಟ್ಟ ಪರಿಶೀಲನೆ ನಡೆಸಿ, ನಿಯಮಾನುಸಾರವೇ ಕಾಮಗಾರಿ ನಡೆಯುವಂತೆ ನೋಡಿಕೊಳ್ಳಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

ಶಾಲಾ ಕಟ್ಟಡವು ವಿದ್ಯಾರ್ಥಿಗಳ ಶಿಕ್ಷಣಕ್ಕೆ ಸಂಬಂಧಿಸಿದ ಪ್ರಮುಖ ಮೂಲಸೌಕರ್ಯವಾಗಿರುವುದರಿಂದ ಕಾಮಗಾರಿಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು. ಕಟ್ಟಡ ನಿರ್ಮಾಣ ಪೂರ್ಣಗೊಂಡ ಬಳಿಕ

> ಕಿತ್ತೂರು ರಾಣಿ ಚನ್ನಮ್ಮ ಶಾಲೆ ನಿರ್ಮಾಣ ಕಾಮಗಾರಿ ಮಂದಗತಿಯಲ್ಲಿ ಸಾಗುತ್ತಿದ್ದು, ಬಹುತೇಕ ಕಟ್ಟಡಗಳ ಕಾಮಗಾರಿ ಕಳಪೆಯಾಗಿದೆ. ಕಟ್ಟಡ ನಿರ್ಮಾಣಕ್ಕೆ ಬಳಸುತ್ತಿರುವ ಸಾಮಗ್ರಿಗಳ ಗುಣಮಟ್ಟವೂ ಸಮರ್ಪಕವಾಗಿಲ್ಲ.
> **-ಮಲ್ಲು ನಾಯಕ**, ಸ್ಥಳೀಯ ನಿವಾಸಿ

ದೋಷಗಳು ಕಂಡುಬಂದರೆ ಅವುಗಳನ್ನು ಸರಿಪಡಿಸಲು ಹೆಚ್ಚುವರಿ ಸಾರ್ವಜನಿಕ ಹಣ ವ್ಯಯವಾಗುವ ಸಾಧ್ಯತೆಯೂ ಇದೆ. ಹೀಗಾಗಿ ಕಾಮಗಾರಿ ನಡೆಯುತ್ತಿರುವ ಹಂತದಲ್ಲಿಯೇ ಗುಣಮಟ್ಟವನ್ನು ಪರಿಶೀಲಿಸಿ, ಲೋಪಗಳಿದ್ದರೆ ಸಂಬಂಧಿಸಿದ ಗುತ್ತಿಗೆದಾರರಿಂದ ನಿಯಮಾನುಸಾರ ಸರಿಪಡಿಸುವ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಬೇಕು. ಕಟ್ಟಡ ನಿರ್ಮಾಣಕ್ಕೆ ಬಳಸುತ್ತಿರುವ ಸಿಮೆಂಟ್, ಮರಳು, ಕಬ್ಬಿಣ ಸೇರಿದಂತೆ ಪ್ರಮುಖ ಸಾಮಗ್ರಿಗಳ ಗುಣಮಟ್ಟವನ್ನು ತಾಂತ್ರಿಕವಾಗಿ ಪರೀಕ್ಷಿಸಬೇಕು. ಕಾಮಗಾರಿಯ ಅಂದಾಜು ಮೊತ್ತ, ಟೆಂಡರ್ ಷರತ್ತುಗಳು ಹಾಗೂ ಅನುಮೋದಿತ ವಿನ್ಯಾಸದಂತೆ ನಿರ್ಮಾಣ ನಡೆಯುತ್ತಿದೆಯೇ ಎಂಬುದನ್ನೂ ಪರಿಶೀಲಿಸುವ ಅಗತ್ಯವಿದೆ.

ಸಾರ್ವಜನಿಕ ಹಣದಿಂದ ನಿರ್ಮಾಣವಾಗುತ್ತಿರುವ ಶಾಲಾ ಕಟ್ಟಡದ ಗುಣಮಟ್ಟದ ಕುರಿತು ಯಾವುದೇ ಅನುಮಾನ ಉಳಿಯದಂತೆ ಪಾರದರ್ಶಕವಾಗಿ ಪರಿಶೀಲನೆ ನಡೆಸಿ, ತಪ್ಪು ಕಂಡುಬಂದಲ್ಲಿ ಹೊಣೆಗಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ವಿದ್ಯಾರ್ಥಿಗಳಿಗೆ ಸುರಕ್ಷಿತ ಹಾಗೂ ಗುಣಮಟ್ಟದ ಶಿಕ್ಷಣ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಕಟ್ಟಡ ಕಾಮಗಾರಿಯನ್ನು ನಿಗದಿತ ಮಾನದಂಡಗಳಂತೆ ಪೂರ್ಣಗೊಳಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಅರ್ಥಪೂರ್ಣವಾಗಿ ದಸರಾ ಆಚರಣೆಗೆ ಅಗತ್ಯ ಕ್ರಮಕ್ಕೆ ಆಯುಕ್ತ ಜುಬಿನ್ ಸೂಚನೆ




ರಾಯಚೂರು ಸೆ. 29 (ಕರ್ನಾಟಕ ವಾರ್ತೆ): ರಾಯಚೂರು ನಗರದಲ್ಲಿ ಅಕ್ಟೋಬರ್ 20ರ ಬೆಳಿಗ್ಗೆ 12.30ಕ್ಕೆ ನಾಡ ಹಬ್ಬ ದಸರಾ ಆಚರಣೆ ಹಿನ್ನೆಲೆಯಲ್ಲಿ ಇಂದು ಮಹಾನಗರ ಪಾಲಿಕೆಯ ಜೋನಲ್ 01ರ ಕಚೇರಿಯ ಸಭಾಂಗಣದಲ್ಲಿ ಪಾಲಿಕೆಯ ಆಯುಕ್ತರ ಅಧ್ಯಕ್ಷತೆ ಪೂರ್ವಭಾವಿ ಸಭೆ ಯಶಸ್ವಿಯಾಗಿ ಜರುಗಿತು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಕರ್ನಾಟಕ ವಿಧಾನ ಪರಿಷತ್ತಿಗೆ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ ಹಿನ್ನಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಈ ಚುನಾವಣಾ ಮಾರ್ಗಸೂಚಿಗಳನ್ನು ಪಾಲಿಸುವ ಮೂಲಕ ರಾಯಚೂರು ನಗರದಲ್ಲಿ ಅರ್ಥಪೂರ್ಣ ಹಾಗೂ ಸಡಗರದಿಂದ ದಸರಾ ಆಚರಣೆಗೆ ಅಗತ್ಯ ಸಿದ್ದತೆ ಮಾಡಿಕೊಳ್ಳುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ದಸರಾ ಹಬ್ಬದ ಅಂಗವಾಗಿ ಅಕ್ಟೋಬರ್ 20ರ ಬೆಳಿಗ್ಗೆ 12:30 ಗಂಟೆಗೆ 2ನೇ ಪುಟಕ್ಕೆ

## ಪ್ರವಾಸಿ ತಾಣಗಳ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ: ಡಿಸಿ ಪೂವಿತಾ ಎಸ್.




ರಾಯಚೂರು, ಸೆ.29: ಜಿಲ್ಲೆಯ ಐತಿಹಾಸಿಕ, ನೈಸರ್ಗಿಕ ಹಾಗೂ ಸಾಂಸ್ಕೃತಿಕ ಮಹತ್ವದ ಪ್ರವಾಸಿ ತಾಣಗಳನ್ನು ಸಂರಕ್ಷಿಸಿ, ಅವುಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.

ನಗರದ ಬಸ್ ನಿಲ್ದಾಣ ಸಮೀಪದ ಮೆಕ್ಕಾ ದರ್ವಾಜ ಕೋಟೆ ಆವರಣದಲ್ಲಿ ಜಿಲ್ಲಾಡಳಿತ, ರಾಯಚೂರು ಮಹಾನಗರ ಪಾಲಿಕೆ, ಪುರಾತತ್ವ, ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಪ್ರವಾಸೋದ್ಯಮ ದಿನಾಚರಣೆ2026ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರವಾಸೋದ್ಯಮವು ಕೇವಲ ಮನರಂಜನೆಗೆ ಸೀಮಿತವಾಗಿಲ್ಲ. ದೇಶದ ಆರ್ಥಿಕ ಚಟುವಟಿಕೆಗೆ ಉತ್ತೇಜನ ನೀಡುವುದರೊಂದಿಗೆ 2ನೇ ಪುಟಕ್ಕೆ

## ಎಸ್ಐಆರ್ ವಿರೋಧಿಸಿ ಜನರನ್ನು ದಾರಿ ತಪ್ಪಿಸುವುದು ಸರಿಯಲ್ಲ: ಕೆ. ವಿರೂಪಾಕ್ಷಪ್ಪ




ಸಿಂಧನೂರು: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯನ್ನು ಕಾಂಗ್ರೆಸ್ ವಿರೋಧಿಸುತ್ತಿರುವುದು ಸರಿಯಲ್ಲ. ಈ ವಿಚಾರದಲ್ಲಿ ಜನರಲ್ಲಿ ಗೊಂದಲ ಮೂಡಿಸುವ ಬದಲು ಚುನಾವಣಾ ಪ್ರಕ್ರಿಯೆಯ ಬಗ್ಗೆ ವಿಶ್ವಾಸ ಮೂಡಿಸುವ ಕೆಲಸ ಮಾಡಬೇಕು ಎಂದು ಮಾಜಿ ಸಂಸದ ಕೆ. ವಿರೂಪಾಕ್ಷಪ್ಪ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್ಐಆರ್ ಪ್ರಕ್ರಿಯೆಗೆ ಕಾಂಗ್ರೆಸ್ ವಿರೋಧ ವ್ಯಕ್ತಪಡಿಸುತ್ತಿರುವುದನ್ನು ಟೀಕಿಸಿದರು. ಚುನಾವಣಾ ಆಯೋಗವು ಮತದಾರರ ಪಟ್ಟಿಯ 2ನೇ ಪುಟಕ್ಕೆ






# ಸೆ. 30ರಂದು ಯರಮರಸ್ ದಂಡು ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ರಾಯಚೂರು ಸೆ. 29 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-02ರ ಎಪಿಎಮ್‌ಸಿ 110ಕೆವಿ ವಿದ್ಯುತ್ ಉಪಕೇಂದ್ರದಲ್ಲಿ ಕಾಮಗಾರಿಯನ್ನು ಹಮ್ಮಿಕೊಂಡ ಪ್ರಯುಕ್ತ ಸೆಪ್ಟಂಬರ್ 30ರ ಬೆಳಿಗ್ಗೆ 10.30ರಿಂದ ಮಧ್ಯಾಹ್ನ 3.30ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಯರಮರಸ್ ದಂಡು, ಏಗನೂರು, ಕ್ರೀಯೇಟಿವ್ ಗಾರ್ಡನ್, ಏರ‍್ರೂಟ್, ಡೈಯಟ್ ಕಾಲೇಜ್, ಎಸ್‌ಟಿಬಿಟಿ ಯರಮರಸ್ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ನಿರಂತರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-02ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ. 01ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ರಾಯಚೂರು ಸೆ. 29 (ಕರ್ನಾಟಕ ವಾರ್ತೆ): ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಅಕ್ಟೋಬರ್ 01 ರಂದು ಬೆಳಿಗ್ಗೆ 10 ಗಂಟೆಯಿದ ಮಧ್ಯಾಹ್ನ 1 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಲ್ಲಾ ಪದವೀಧರರು ಆಸಕ್ತ 18 ರಿಂದ 28 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9008211750, 9916931616 ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ.1ರಂದು ಸಿರವಾರದಲ್ಲಿ 8 ತಾಸು ವಿದ್ಯುತ್ ವ್ಯತ್ಯಯ

ಸಿರವಾರ, ಸೆ.29: ಪಟ್ಟಣದಲ್ಲಿ ಹೊಸದಾಗಿ ಎರಡು 11 ಕೆವಿ ಎಕ್ಸ್‌ಪ್ರೆಸ್ ವಿದ್ಯುತ್ ಲೈನ್‌ಗಳನ್ನು ಅಳವಡಿಸುವ ಕಾಮಗಾರಿ ಕೈಗೆತ್ತಿಕೊಂಡಿರುವ ಹಿನ್ನೆಲೆಯಲ್ಲಿ ಅ.1ರಂದು ಗುರುವಾರ ಸಿರವಾರ ಪಟ್ಟಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಅಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಒಟ್ಟು 8 ತಾಸು ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದೆ ಎಂದು ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಜೆಸ್ಕಾಂ) ಅಧಿಕಾರಿಗಳು ತಿಳಿಸಿದ್ದಾರೆ.

ವಿದ್ಯುತ್ ಸರಬರಾಜು ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ಉದ್ದೇಶದಿಂದ ಹೊಸದಾಗಿ ಎರಡು 11 ಕೆವಿ ಎಕ್ಸ್‌ಪ್ರೆಸ್ ಲೈನ್‌ಗಳ ಅಳವಡಿಕೆ ಕಾಮಗಾರಿ ನಡೆಯಲಿದ್ದು, ಕಾಮಗಾರಿ ಪೂರ್ಣಗೊಳ್ಳುವವರೆಗೆ ನಿಗದಿತ ಅವಧಿಯಲ್ಲಿ ವಿದ್ಯುತ್ ಪೂರೈಕೆ ಸ್ಥಗಿತಗೊಳಿಸಲಾಗುತ್ತದೆ.

ಆದ್ದರಿಂದ ಸಿರವಾರ ಪಟ್ಟಣ ಹಾಗೂ ವಿದ್ಯುತ್ ವ್ಯತ್ಯಯಕ್ಕೆ ಒಳಪಡುವ ಸುತ್ತಮುತ್ತಲಿನ ಪ್ರದೇಶಗಳ ಸಾರ್ವಜನಿಕರು ಮತ್ತು ಗ್ರಾಹಕರು ಅಗತ್ಯ ಮುನ್ನೆಚ್ಚರಿಕೆ ವಹಿಸಿ, ಕಾಮಗಾರಿಗೆ ಸಹಕರಿಸುವಂತೆ ಜೆಸ್ಕಾಂ ಅಧಿಕಾರಿಗಳು ಮನವಿ ಮಾಡಿದ್ದಾರೆ.

ಅಮೃತ ವಾಣಿ
ಬೇಕಾದರೆ ಬೆರೆತು ನಡೆ
ಸಾಕಾದರೆ ಸರಿದು ನಡೆ ಎರಡು
ಬೇಡವಾದರೆ ಸುಮ್ಮನೆ ನಡೆ.

1601 ನೇಯ ದಿನಕ್ಕೆ
ಏಮ್ಸ್
ಹೋರಾಟ

# ಚಿಕ್ಕಹೆಸರೂರಿನಲ್ಲಿ ಅನಿರ್ದಿಷ್ಟಾವಧಿ ಧರಣಿ 8ನೇ ದಿನಕ್ಕೆ



ಲಿಂಗಸುಗೂರು: ತಾಲೂಕಿನ ಚಿಕ್ಕಹೆಸರೂರು ಗ್ರಾಮದಲ್ಲಿ ರಾಷ್ಟ್ರೀಯ ಹೆದ್ದಾರಿ ಎನ್‌ಎಚ್ -748ಎ ಭಾರತಮಾಲಾ ಯೋಜನೆಗಾಗಿ ಭೂಮಿ ಕಳೆದುಕೊಂಡ ಬಡ ದಲಿತ ರೈತರಿಗೆ ನ್ಯಾಯ ಒದಗಿಸುವಂತೆ ಆಗ್ರಹಿಸಿ ದಲಿತ ಸಂರಕ್ಷಣಾ ಸಮಿತಿ ಜಿಲ್ಲಾ ಹಾಗೂ ತಾಲೂಕು ಘಟಕಗಳ ನೇತೃತ್ವದಲ್ಲಿ ನಡೆಯುತ್ತಿರುವ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ 8ನೇ ದಿನಕ್ಕೆ ಕಾಲಿಟ್ಟಿದೆ.

ಚಿಕ್ಕಹೆಸರೂರು ವ್ಯಾಪ್ತಿಯಲ್ಲಿ ನಡೆಯುತ್ತಿರುವ ಧರಣಿಯಲ್ಲಿ ಭೂಮಿ ಕಳೆದುಕೊಂಡ ರೈತರು, ದಲಿತ ಸಂರಕ್ಷಣಾ ಸಮಿತಿಯ ಪದಾಧಿಕಾರಿಗಳು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ನಿರಂತರವಾಗಿ ಪಾಲ್ಗೊಂಡು ಹೋರಾಟ ಮುಂದುವರಿಸಿದ್ದಾರೆ.

ಧರಣಿ ಎಂಟು ದಿನಗಳಿಂದ ನಡೆಯುತ್ತಿದ್ದರೂ ಸಂಬಂಧಪಟ್ಟ ಇಲಾಖೆಯ ಯಾವುದೇ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಆಲಿಸಿಲ್ಲ ಎಂದು ಹೋರಾಟಗಾರರು ಅಸಮಾಧಾನ ವ್ಯಕ್ತಪಡಿಸಿದರು. ರಾಷ್ಟ್ರೀಯ ಹೆದ್ದಾರಿ ನಿರ್ಮಾಣಕ್ಕಾಗಿ ಭೂಮಿ ಕಳೆದುಕೊಂಡು ಅನ್ಯಾಯಕ್ಕೆ ಒಳಗಾಗಿರುವ ಬಡ ದಲಿತ ರೈತರ ಸಮಸ್ಯೆಗಳಿಗೆ ಅಧಿಕಾರಿಗಳು ಸ್ಪಂದಿಸಿ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ರೈತರ ಸಮಸ್ಯೆಗಳನ್ನು ಆಲಿಸಿ ಸೂಕ್ತ ಪರಿಹಾರ ಕಲ್ಪಿಸುವವರೆಗೂ ಹೋರಾಟ ಮುಂದುವರಿಸಲಾಗುವುದು ಎಂದು ಪ್ರತಿಭಟನಾಕಾರರು ತಿಳಿಸಿದರು.

ಈ ಸಂದರ್ಭದಲ್ಲಿ ದಲಿತ ಸಂರಕ್ಷಣಾ ಸಮಿತಿಯ ಜಿಲ್ಲಾಧ್ಯಕ್ಷ ಬಾಲಸ್ವಾಮಿ ಜಿನ್ನಾಪೂರ, ತಾಲೂಕು ಅಧ್ಯಕ್ಷ ಕಿರಣಕುಮಾರ, ತಾಲೂಕು ಉಪಾಧ್ಯಕ್ಷ ಪ್ರದೀಪ್ ಮುತ್ತು, ಮುದುಗಲ್ ತಾಲೂಕು ಪ್ರಧಾನ ಕಾರ್ಯದರ್ಶಿ ಚಿನ್ನಪ್ಪ ರಾರಾವಿ, ಪತ್ರಿಕಾ ಮಾಧ್ಯಮ ಸಲಹೆಗಾರ ವಿಘ್ನೇಶ್ ಹಿರೇನಗನೂರು, ಹಟ್ಟಿ ಅಧ್ಯಕ್ಷ ಮೌನೇಶ್ ಬಿ., ಜಿಲ್ಲಾ ಕಾರ್ಯಾಧ್ಯಕ್ಷ ಸಿದ್ದಣ್ಣ ಹೂವಿನಬಾವಿ, ಮರಿಸ್ವಾಮಿ ಬೇನಕನಾಳ, ತಾಲೂಕು ಉಪಾಧ್ಯಕ್ಷ ಲಕ್ಷ್ಮಣ ಕಡಬೂರು, ಕಂಟೇಶ ಬಸಾಪೂರ, ಕವಿತಾಳ ಹೋಬಳಿ ಅಧ್ಯಕ್ಷ ಹುಚ್ಚಪ್ಪ ಬುಳ್ಳಾಪೂರ, ಕವಿತಾಳ ಪ್ರಧಾನ ಕಾರ್ಯದರ್ಶಿ ಬಸವರಾಜ ಕೆಳಗೇರಿ, ಲಳ್ಳೆಪ್ಪ ಕವಿತಾಳ, ಮೌನೇಶ್, ಅಮರೇಶ, ಅನಿಲ್ ಕುಮಾರ, ಚಿದಾನಂದ, ಶರಣಪ್ಪ ಸೇರಿದಂತೆ ಸಮಿತಿಯ ಪದಾಧಿಕಾರಿಗಳು, ಚಿಕ್ಕಹೆಸರೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

# ನಿಲೋಗಲ್ ಕ್ರಾಸ್‌ನಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಆಗ್ರಹ



ಹಟ್ಟಿ ಚಿನ್ನದ ಗಣಿ: ಸಮೀಪದ ಗೆಜ್ಜಲಗಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿಲೋಗಲ್ ಕ್ರಾಸ್‌ನಲ್ಲಿ ದೀರ್ಘಕಾಲದಿಂದ ಮುಂದುವರಿದಿರುವ ಕುಡಿಯುವ ನೀರಿನ ಸಮಸ್ಯೆಯನ್ನು ತಕ್ಷಣ ಪರಿಹರಿಸಬೇಕು ಹಾಗೂ ಚಿಕ್ಕನಗನೂರಿನ ಕರ ವಸೂಲಿಗಾರರನ್ನು ವರ್ಗಾವಣೆ ಮಾಡಬೇಕು ಎಂದು ಆಗ್ರಹಿಸಿ ಅಖಿಲ ಭಾರತ ಕಿಸಾನ್ ಸಂಘಟನೆ (ಎಐಕೆಎಸ್) ಪದಾಧಿಕಾರಿಗಳು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಸಲ್ಲಿಸಿದರು.

ನಿಲೋಗಲ್ ಕ್ರಾಸ್‌ನಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದು, ಸಮಸ್ಯೆ ಪರಿಹಾರಕ್ಕೆ ಒತ್ತಾಯಿಸಿ ಸೆ.5ರಂದು ಸಾರ್ವಜನಿಕರೊಂದಿಗೆ ಧರಣಿ ನಡೆಸಲಾಗಿತ್ತು. ಆದರೂ ಇದುವರೆಗೆ ಸಂಬಂಧಪಟ್ಟ ಅಧಿಕಾರಿಗಳು ಸಮಸ್ಯೆ ಪರಿಹಾರಕ್ಕೆ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಸಂಘಟನೆಯ ಪದಾಧಿಕಾರಿಗಳು ಅಸಮಾಧಾನ ವ್ಯಕ್ತಪಡಿಸಿದರು.

ಇದೇ ವೇಳೆ ಚಿಕ್ಕನಗನೂರಿನ ಕರ ವಸೂಲಿಗಾರ ಯಂಕಪ್ಪ/ಅಮಲಯ್ಯ ಅವರ ಕುರಿತು ಸಾರ್ವಜನಿಕರಿಂದ ನಿರಂತರವಾಗಿ ದೂರುಗಳು ಕೇಳಿಬರುತ್ತಿದ್ದು, ಈ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿ ಅವರನ್ನು ಬೇರೆಡೆಗೆ ವರ್ಗಾವಣೆ ಮಾಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ನಿಲೋಗಲ್ ಕ್ರಾಸ್‌ನ ಕುಡಿಯುವ ನೀರಿನ ಸಮಸ್ಯೆಯನ್ನು ತಕ್ಷಣ ಬಗೆಹರಿಸಬೇಕು, ಸಂಬಂಧಪಟ್ಟ ಕರ ವಸೂಲಿಗಾರರನ್ನು ವರ್ಗಾವಣೆ ಮಾಡಬೇಕು ಹಾಗೂ ಸಾರ್ವಜನಿಕರಿಂದ ಬಂದಿರುವ ದೂರುಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ಬೇಡಿಕೆಗಳ ಈಡೇರಿಕೆಗೆ ಸಂಬಂಧಪಟ್ಟ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸದಿದ್ದಲ್ಲಿ ಎಐಕೆಎಸ್ ನೇತೃತ್ವದಲ್ಲಿ ಕಾನೂನುಬದ್ಧ ಹಾಗೂ ಶಾಂತಿಯುತ ಹೋರಾಟ, ಪ್ರತಿಭಟನೆ ಮತ್ತು ಜನಾಂದೋಲನ ಹಮ್ಮಿಕೊಳ್ಳಲಾಗುವುದು ಎಂದು ಸಂಘಟನೆಯ ಪದಾಧಿಕಾರಿಗಳು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಅಖಿಲ ಭಾರತ ಕಿಸಾನ್ ಸಂಘಟನೆಯ ತಾಲೂಕು ಅಧ್ಯಕ್ಷ ಶರಣಪ್ಪ ಸಾಲಿ, ವಿನಯ್ ಕುಮಾರ್ ಚಿಕ್ಕನಾಗನೂರು, ಅಂಬಣ್ಣ ಭಜಂತ್ರಿ, ಹುಸೇನ್ ಸಾಬ್ ನಿಲೋಗಲ್, ಖಾಜಾ ಸಾಬ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಾದಕ ವ್ಯಸನದಿಂದ ದೂರವಿದ್ದು ಆರೋಗ್ಯಕರ ಸಮಾಜ ನಿರ್ಮಿಸಿ: ಡಾ. ಅಂಬಿಕಾ



ಮಾನ್ವಿ: ಪಟ್ಟಣದ ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಹಾಗೂ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ನಶಾಮುಕ್ತ ಭಾರತ ಅಭಿಯಾನ ಅಂಗವಾಗಿ ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದ ವೈದ್ಯಾಧಿಕಾರಿ ಡಾ. ಅಂಬಿಕಾ ಮಧುಸೂದನ್ ನಾಯಕ, ಮಾದಕ ವ್ಯಸನವು ವ್ಯಕ್ತಿಯ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಮಾತ್ರವಲ್ಲದೆ ಕುಟುಂಬ ಹಾಗೂ ಸಾಮಾಜಿಕ ಜೀವನದ ಮೇಲೂ ಗಂಭೀರ ಪರಿಣಾಮ ಬೀರುತ್ತದೆ. ಒತ್ತಡದ ಜೀವನ, ಖಿನ್ನತೆ ಸೇರಿದಂತೆ ವಿವಿಧ ಕಾರಣಗಳಿಂದ ಕೆಲವರು ವ್ಯಸನಕ್ಕೆ ಒಳಗಾಗುತ್ತಾರೆ. ಅಂತಹವರನ್ನು ತಿರಸ್ಕರಿಸುವ ಬದಲು ಸೂಕ್ತ ಚಿಕಿತ್ಸೆ, ಆಪ್ತ ಸಮಾಲೋಚನೆ ಹಾಗೂ ಪುನರ್ವಸತಿ ಕಲ್ಪಿಸಿ ಅವರನ್ನು ಸಹಜ ಜೀವನಕ್ಕೆ ಮರಳುವಂತೆ ಮಾಡುವುದು ಕುಟುಂಬ ಮತ್ತು ಸಮಾಜದ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಕಾಲೇಜಿನ ಪ್ರಾಚಾರ್ಯ ಆಂಜನೇಯ ನಸಲಾಪುರ ಮಾತನಾಡಿ, ಇಂದಿನ ಯುವಜನತೆ ದೇಶದ ಅಮೂಲ್ಯ ಸಂಪತ್ತಾಗಿದ್ದು, ಯುವಕರು ಮಾದಕ ವ್ಯಸನದ ಬಲೆಗೆ ಸಿಲುಕಿದರೆ ಅವರ ವೈಯಕ್ತಿಕ ಭವಿಷ್ಯದ ಜೊತೆಗೆ ದೇಶದ ಅಭಿವೃದ್ಧಿಯ ಮೇಲೂ ಪ್ರತಿಕೂಲ ಪರಿಣಾಮ ಉಂಟಾಗುತ್ತದೆ. ಹೀಗಾಗಿ ಮಾದಕ ವಸ್ತುಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸುವ ಕುರಿತು ಯುವಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕಾಗಿದೆ. ನಶಾಮುಕ್ತ ಭಾರತ ನಿರ್ಮಾಣ ಪ್ರತಿಯೊಬ್ಬ ನಾಗರಿಕನ ಸಂಕಲ್ಪವಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ ಶರಣಬಸವ ಕರಡಿಗುಡ್ಡ, ಉಪನ್ಯಾಸಕರಾದ ಅಂಬಣ್ಣ ನಾಯಕ, ಆಫ್ರಿನಾ ಬೇಗಂ, ಸಂತೋಷ ಸೇರಿದಂತೆ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಅರ್ಥಪೂರ್ಣವಾಗಿ ದಸರಾ ಆಚರಣೆಗೆ ಅಗತ್ಯ ಕ್ರಮಕ್ಕೆ ಆಯುಕ್ತ ಜುಬಿನ್ ಸೂಚನೆ

ರಾಯಚೂರು ಮಹಾನಗರ ಪಾಲಿಕೆ ಜೋನಲ್ 01ರ ಕಚೇರಿಯಿಂದ ಮೆರವಣಿಗೆಯನ್ನು ಪ್ರಾರಂಭ ಮಾಡಿ,ಸಾಯಂಕಾಲ 6ಗಂಟೆಗೆ ಬನ್ನಿ ಮಂಟಪ ತಲುಪುವುದು. ಇದಕ್ಕಾಗಿ ನಾಡದೇವಿ ಮಾತೆಯ ಭಾವಚಿತ್ರ ಮೆರವಣಿಗೆಗೆ ಅಗತ್ಯ ಸಿದ್ದತೆ ಮಾಡಿಕೊಳ್ಳುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬನ್ನಿ ಮಂಟಪದಲ್ಲಿ ದೀಪಾಲಂಕಾರ, ಶ್ಯಾಮಿಯಾನ್, ಚೆರ್ ಮತ್ತು ಕಚೇರಿಯಲ್ಲಿ ಶಾಮಿಯಾನ, ಚೇರ್, ದೀಪಾಲಂಕಾರ ಹಾಗೂ ಮೆರವಣಿಗೆಯಲ್ಲಿ ಸೌಂಡ್ ಸಿಸ್ಟಮ್ ವ್ಯವಸ್ಥೆಯನ್ನು ಕೈಗೊಳ್ಳಬೇಕು. ದಸರಾ ಮೆರವಣಿಗೆಯಲ್ಲಿ ಸರ್ಕಾರಿ ಅಥವಾ ಖಾಸಗಿ ಶಾಲೆಗಳಿಂದ ಸಂಬಧಪಟ್ಟ ಶಿಕ್ಷಕರ ವತಿಯಿಂದ ತಂಡವನ್ನು ರಚಿಸಿ ಸುಮಾರು 15 ಗುಂಪುಗಳನ್ನು (ತಂಡ) ರಚಿಸಲು ಸೂಕ್ತ ನಿರ್ದೇಶನವನ್ನು ಆಯಾ ಶಾಲೆಯ ಮುಖ್ಯಸ್ಥರಿಗೆ ನೀಡಬೇಕು. ಈ ದಸರಾ ಮೆರವಣಿಗೆಯಲ್ಲಿ ಸಾಂಸ್ಕೃತಿ ಕಲಾಪ್ರದರ್ಶನ ಮಾಡಬೇಕೆಂದರು.

ದಸರಾ ಆಚರಣೆಗೆ ರಾಯಚೂರು ಸಾರ್ವಜನಿಕರು ಸೂಕ್ತ ಸಲಹೆಗಳನ್ನು ನೀಡುವ ಮೂಲಕ ಜೊತೆಗೆ ತಾವೂ ಕೂಡ ಕೈಜೋಡಿಸಿ ಹೇಗೆ ಸಹಾಯ ಮಾಡಬಹುದು ಎಂಬುದನ್ನು ತಿಳಿಸಬೇಕು. ಬರಗಾಲದ ಪರಿಸ್ಥಿತಿ ಮತ್ತು ನಗರ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ವಿವಿಧ ಸಮಸ್ಯೆಗಳನ್ನು ಗುರುತಿಸಿ ಅವುಗಳಿಗೆ ಪರಿಹಾರ ನೀಡಲಾಗುವುದು. ಅಲ್ಲದೆ ಮೂಲಭೂತ ಸೌಕರ್ಯಗಳಿಗೆ ಪಾಲಿಕೆಯ ಅನುದಾನ ಲಭ್ಯತೆಗೆ ತಕ್ಕಂತೆ ಕೆಲಸಗಳಿಗೆ ಪ್ಲಾನ್ ಮಾಡಬೇಕಾಗುತ್ತದೆ ಎಂದರು.

ಸದರಿ ದಿನಾಂಕದದು ಮಹಾನಗರ ಪಾಲಿಕೆಯ ಸಿಬ್ಬಂದಿ ವರ್ಗದವರು, ಶಾಲೆಯ ಶಿಕ್ಷಕರು, ಶಾಲೆಯ ಮಕ್ಕಳು ಈ ಮೆರವಣಿಗೆಯಲ್ಲಿ ಭಾಗವಹಿಸಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸ್ಥಳೀಯ ಕಲಾತಂಡಗಳಿದ ಕನಿಷ್ಠ 15 ಕಲಾ ತಂಡವನ್ನು ಆಹ್ವಾನಿಸಿ ಮೆರವಣಿಗೆಯಲ್ಲಿ ಪ್ರದರ್ಶನ ನೀಡಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ದೀಪ ಅಲಂಕಾರ ಮತ್ತು ವಿವಿಧ ಅಲಂಕಾರ ಮಾಡಬೇಕು. ಸದರಿ ಮೆರವಣಿಗೆಯಲ್ಲಿ ರಥ ಮತ್ತು ರಥಕ್ಕೆ ಅಲಂಕಾರ ವ್ಯವಸ್ಥೆ ಮಾಡಿ, ಸ್ವ-ಸಹಾಯ ಗುಂಪುಗಳಿದ 200 ಮಹಿಳೆಯರ 2 ತಂಡಗಳು ಕುಂಭಮೇಳ ಜರುಗಿಸಲು ಅಗತ್ಯ ಕ್ರಮ ವಹಿಸಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಶರಣಪ್ಪ, ಮುರಾಳಿಧರ್, ಪಾಲಿಕೆಯ ಅಭಿವೃದ್ಧಿ ವಿಭಾಗದ ಉಪ ಆಯುಕ್ತ ಭರತ್ ಸೇರಿದಂತೆ ಮುಖಂಡರಾದ ಕೆ.ಶಾಂತಪ್ಪ, ಜಯಣ್ಣ, ಕನ್ನಡ ಪರ ಸಂಘಟನೆಯ ಮುಖಂಡರಾದ ಶರಣಪ್ಪ, ಶಿವುಕುಮಾರ್, ವಾಣಿಜ್ಯೋದಮ ಸಂಘದ ಅಧ್ಯಕ್ಷರಾದ ಕಮಲ್ ಕಿಶೋರ್, ಕಲ್ಯಾಣ ಸಮಿತಿಯ ಜಯಂತ್ ರಾವ್ ಪತ್ತಂಗೆ, ಶಿಲ್ಪ ಮೆಡಿಕಲ್ ಲಕ್ಷ್ಮಿಕಾಂತ್, ಸಾಹಿತ್ಯಿಗಳಾದ ವೆಂಕಟೇಶ ಬೆವಿನಂಚಿ, ಆಂಜಿನೇಯ, ಈರಣ್ಣ ಸೇರಿದಂತೆ ಇತರರು ಇದ್ದರು.

ಕೃಷ್ಣ ಕಟ್ಟಿಮನಿ ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

# ಪ್ರವಾಸಿ ತಾಣಗಳ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ: ಡಿಸಿ ಪೂವಿತಾ ಎಸ್.

ನಮ್ಮ ಸಂಸ್ಕೃತಿ, ಪರಂಪರೆ, ಇತಿಹಾಸ ಹಾಗೂ ಪ್ರಕೃತಿ ಸಂಪತ್ತನ್ನು ಜಗತ್ತಿಗೆ ಪರಿಚಯಿಸುವ ಪ್ರಮುಖ ಕ್ಷೇತ್ರವಾಗಿದೆ. ಹೀಗಾಗಿ ಪ್ರವಾಸಿ ತಾಣಗಳ ಸ್ವಚ್ಛತೆ, ಸುರಕ್ಷತೆ ಹಾಗೂ ಮೂಲ ಸ್ವರೂಪದ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ ಎಂದರು.

ಕರ್ನಾಟಕವು ಪ್ರವಾಸೋದ್ಯಮದ ದೃಷ್ಟಿಯಿಂದ ಅಪಾರ ವೈವಿಧ್ಯ ಹೊಂದಿರುವ ರಾಜ್ಯವಾಗಿದೆ. ಅದೇ ರೀತಿ ರಾಯಚೂರು ಜಿಲ್ಲೆಯೂ ಎರಡು ನದಿಗಳ ನಡುವೆ ನೆಲೆಗೊಂಡಿದ್ದು, ಐತಿಹಾಸಿಕ ಹಾಗೂ ನೈಸರ್ಗಿಕ ಸಂಪತ್ತಿನಿಂದ ಸಮೃದ್ಧವಾಗಿದೆ. ಮಸ್ಕಿಯ ಅಶೋಕ ಕಾಲದ ಐತಿಹಾಸಿಕ ತಾಣಗಳು ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಲ್ಲಿ ಪ್ರವಾಸಿಗರನ್ನು ಸೆಳೆಯುವ ಅನೇಕ ಸ್ಥಳಗಳಿವೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ಗುರುತಿಸಲಾಗಿರುವ 38 ಪ್ರವಾಸಿ ತಾಣಗಳ ಕುರಿತು ಸಾರ್ವಜನಿಕರು ಮತ್ತು ಪ್ರವಾಸಿಗರಿಗೆ ಸುಲಭವಾಗಿ ಮಾಹಿತಿ ದೊರೆಯುವಂತೆ ಮಾಹಿತಿ ಫಲಕಗಳನ್ನು ಅಳವಡಿಸುವ ಕಾರ್ಯ ಕೈಗೊಳ್ಳಲಾಗಿದೆ. ಅಲ್ಲದೆ, ಸರ್ಕಾರಿ ನೌಕರರ ಸಂಘ ಮತ್ತು ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಪ್ರತಿ ತಿಂಗಳು ಮಕ್ಕಳನ್ನು ಜಿಲ್ಲೆಯ ವಿವಿಧ ಪ್ರವಾಸಿ ತಾಣಗಳಿಗೆ ಕರೆದೊಯ್ದು ಅವುಗಳ ಇತಿಹಾಸ ಹಾಗೂ ಮಹತ್ವವನ್ನು ಪರಿಚಯಿಸಲಾಗುತ್ತಿದೆ ಎಂದರು.

ಪರಿಸರ ಸ್ನೇಹಿ ಪ್ರವಾಸೋದ್ಯಮಕ್ಕೆ ಹೆಚ್ಚಿನ ಒತ್ತು ನೀಡಬೇಕಿದೆ. ಈಕೋ ಟೂರಿಸಂ ಮೂಲಕ ಪರಿಸರಕ್ಕೆ ಧಕ್ಕೆಯಾಗದ ರೀತಿಯಲ್ಲಿ ಪ್ರವಾಸದ ಅನುಭವ ಪಡೆಯುವುದರೊಂದಿಗೆ ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಲು ಸಾಧ್ಯವಾಗುತ್ತದೆ. ಜೊತೆಗೆ ಜಿಲ್ಲೆಯಲ್ಲಿರುವ ಇನ್ನಷ್ಟು ಹೊಸ ಪ್ರವಾಸಿ ತಾಣಗಳನ್ನು ಗುರುತಿಸಿ ಅಭಿವೃದ್ಧಿಪಡಿಸಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಪ್ರವಾಸಿ ತಾಣಗಳಿಗೆ ತೆರಳುವವರು ಸ್ವಚ್ಛತೆಯ ಬಗ್ಗೆ ಜವಾಬ್ದಾರಿ ವಹಿಸಬೇಕು. ಪ್ಲಾಸ್ಟಿಕ್ ಬಾಟಲಿ ಹಾಗೂ ಇತರೆ ತ್ಯಾಜ್ಯವನ್ನು ಸ್ಥಳದಲ್ಲೇ ಬಿಸಾಡದೆ ತಮ್ಮೊಂದಿಗೆ ಹಿಂದಕ್ಕೆ ತಂದು ಸೂಕ್ತವಾಗಿ ವಿಲೇವಾರಿ ಮಾಡಬೇಕು. ಈ ಮೂಲಕ ಜೀರೋ ವೇಸ್ಟ್ ಟ್ರೆಕ್ಕಿಂಗ್ ಪರಿಕಲ್ಪನೆಯನ್ನು ಜನಪ್ರಿಯಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಕರೆ ನೀಡಿದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ನಜೀರ್ ಅಹ್ಮದ್ ಕನವಳ್ಳಿ ಮಾತನಾಡಿ, ರಾಯಚೂರು ನಗರದಲ್ಲಿರುವ ಪಾಂಚೆ ಬಿಬಿ ತಾಣದ ಕುರಿತು ಸ್ಥಳೀಯರಲ್ಲಿಯೇ ಹೆಚ್ಚಿನ ಮಾಹಿತಿ ಇಲ್ಲದಿರುವುದು ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ 100 ವಿದ್ಯಾರ್ಥಿಗಳಿಗೆ ಟ್ರೆಕ್ಕಿಂಗ್ ಆಯೋಜಿಸಿ, ಆ ಪ್ರದೇಶದ ವೈಶಿಷ್ಟ್ಯ ಹಾಗೂ ಮಹತ್ವವನ್ನು ಪರಿಚಯಿಸುವ ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯ 38 ಪ್ರವಾಸಿ ತಾಣಗಳ ವಿವರಗಳನ್ನು ಒಂದೇ ವೇದಿಕೆಯಲ್ಲಿ ಲಭ್ಯವಾಗುವಂತೆ ಡಿಜಿಟಲ್ ಮಾಹಿತಿ ವ್ಯವಸ್ಥೆ ಸಿದ್ಧಪಡಿಸಲಾಗಿದೆ. ಜಿಲ್ಲಾಧಿಕಾರಿ ಕಚೇರಿ, ಬಸ್ ನಿಲ್ದಾಣ, ನ್ಯಾಯಾಲಯ, ಜಿಲ್ಲಾ ಪಂಚಾಯಿತಿ ಸೇರಿದಂತೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವ ಸ್ಥಳಗಳಲ್ಲಿ ಕ್ಯೂಆರ್ ಕೋಡ್ ಒಳಗೊಂಡ ಮಾಹಿತಿ ಫಲಕಗಳನ್ನು ಅಳವಡಿಸಲಾಗುತ್ತಿದೆ. ಮೊಬೈಲ್ ಮೂಲಕ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿದರೆ ಹೈಪರ್‌ಲಿಂಕ್ ಮೂಲಕ ಜಿಲ್ಲೆಯ ಎಲ್ಲ 38 ಪ್ರವಾಸಿ ತಾಣಗಳ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದರು.

ಪ್ರವಾಸೋದ್ಯಮವನ್ನು ಆಧುನಿಕ ತಂತ್ರಜ್ಞಾನದೊಂದಿಗೆ ಜೋಡಿಸುವ ನಿಟ್ಟಿನಲ್ಲಿ ಕೃತಕ ಬುದ್ಧಿಮತ್ತೆಯನ್ನೂ ಬಳಸಿಕೊಳ್ಳಲಾಗುತ್ತಿದೆ. ಪ್ರವಾಸಿಗರು ತಮ್ಮ ಅಗತ್ಯ ಮತ್ತು ಲಭ್ಯ ಸಮಯಕ್ಕೆ ಅನುಗುಣವಾಗಿ ಪ್ರವಾಸದ ವೇಳಾಪಟ್ಟಿ ಹಾಗೂ ಪ್ರಯಾಣ ಯೋಜನೆ ರೂಪಿಸಿಕೊಳ್ಳಲು ಎಐ ತಂತ್ರಜ್ಞಾನ ನೆರವಾಗಲಿದೆ ಎಂದು ಹೇಳಿದರು.

ಪ್ರಥಮ ಪಿಯುಸಿ ಹಂತವು ವಿದ್ಯಾರ್ಥಿಗಳ ಜೀವನದಲ್ಲಿ ಮಹತ್ವದ ಘಟ್ಟವಾಗಿದ್ದು, ಎಐ ಹಾಗೂ ಚಾಟ್ ಜಿಪಿಟಿಯಂತಹ ಆಧುನಿಕ ತಂತ್ರಜ್ಞಾನಗಳನ್ನು ಕೇವಲ ಮನರಂಜನೆಗೆ ಬಳಸದೆ ಜ್ಞಾನಾರ್ಜನೆ ಮತ್ತು ಶೈಕ್ಷಣಿಕ ಬೆಳವಣಿಗೆಗೆ ಪೂರಕವಾಗಿ ಬಳಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಇದೇ ವೇಳೆ ಕೆಎಸ್‌ಟಿಡಿಸಿ ವತಿಯಿಂದ ತರಬೇತಿ ಪಡೆದ ಎರಡನೇ ಹಂತದ 20 ಪ್ರವಾಸಿ ಮಿತ್ರರಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ಕಾರ್ಯಕ್ರಮದ ನಂತರ ನಗರದ ಪಾಂಚೆ ಬಿಬಿ ಪ್ರದೇಶದಲ್ಲಿ ವಿದ್ಯಾರ್ಥಿಗಳು ಹಾಗೂ ಭಾಗವಹಿಸಿದ್ದವರಿಗಾಗಿ ಟ್ರೆಕ್ಕಿಂಗ್ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣ ಶಾವಂತಗೇರ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಶರಣಬಸವ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಪ್ರವಾಸೋದ್ಯಮ ಇಲಾಖೆಯ ಪ್ರಥಮ ದರ್ಜೆ ಸಹಾಯಕಿ ಕವಿತಾ, ಸಮಾಲೋಚಕರಾದ ಶ್ರೀನಾಥ, ಆನಂದ, ಆಹಾರ ಇಲಾಖೆಯ ವ್ಯವಸ್ಥಾಪಕ ಜಿ. ಹರೀಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಎಸ್‌ಐಆರ್ ವಿರೋಧಿಸಿ ಜನರನ್ನು ದಾರಿ ತಪ್ಪಿಸುವುದು ಸರಿಯಲ್ಲ: ಕೆ. ವಿರೂಪಾಕ್ಷಪ್ಪ

ಪರಿಷ್ಕರಣೆ ಪ್ರಕ್ರಿಯೆಯನ್ನು ನಡೆಸುತ್ತಿದ್ದು, ಎಸ್‌ಐಆರ್2026ಕ್ಕೆ ಸಂಬಂಧಿಸಿದ ಸೇವೆಗಳನ್ನು ಆಯೋಗದ ಅಧಿಕೃತ ಮತದಾರರ ಪೋರ್ಟಲ್‌ನಲ್ಲಿಯೂ ಒದಗಿಸಲಾಗಿದೆ.

ಇವಿಎಂ ಕುರಿತು ಕಾಂಗ್ರೆಸ್ ನಾಯಕರು ಆಗಾಗ ಅನುಮಾನ ವ್ಯಕ್ತಪಡಿಸುತ್ತಾರೆ ಎಂದು ಆರೋಪಿಸಿದ ವಿರೂಪಾಕ್ಷಪ್ಪ, ಚುನಾವಣೆಯಲ್ಲಿ ಗೆದ್ದಾಗ ಇವಿಎಂ ಬಗ್ಗೆ ಪ್ರಶ್ನಿಸದೆ, ಸೋತಾಗ ಯಂತ್ರಗಳ ಮೇಲೆ ಆರೋಪ ಮಾಡುವುದು ಸರಿಯಲ್ಲ ಎಂದು ಹೇಳಿದರು. ತಮಿಳುನಾಡು, ಕೇರಳ ಹಾಗೂ ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ವಿಭಿನ್ನ ಪಕ್ಷಗಳು ಅಧಿಕಾರಕ್ಕೆ ಬಂದಿರುವುದನ್ನು ಉಲ್ಲೇಖಿಸಿ, ಚುನಾವಣಾ ಫಲಿತಾಂಶಗಳನ್ನು ಇವಿಎಂ ವಿಚಾರದೊಂದಿಗೆ ರಾಜಕೀಯವಾಗಿ ಜೋಡಿಸುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು.

ಇವಿಎಂ ಇತಿಹಾಸದ ಕುರಿತು ಚುನಾವಣಾ ಆಯೋಗದ ಅಧಿಕೃತ ದಾಖಲೆಗಳ ಪ್ರಕಾರ, ಯಂತ್ರದ ಪರಿಕಲ್ಪನೆ 1977ರಲ್ಲಿ ಆರಂಭವಾಗಿದ್ದು, 1982ರಲ್ಲಿ ಕೇರಳದ ಪರೂರು ವಿಧಾನಸಭಾ ಕ್ಷೇತ್ರದಲ್ಲಿ ಮೊದಲ ಬಾರಿಗೆ ಪ್ರಯೋಗಾತ್ಮಕವಾಗಿ ಬಳಸಲಾಯಿತು. ಇವಿಎಂ ಬಳಕೆಗೆ ಕಾನೂನುಬದ್ಧ ಅವಕಾಶ ಕಲ್ಪಿಸುವ ಜನಪ್ರತಿನಿಧಿಗಳ ಕಾಯ್ದೆಯ ತಿದ್ದುಪಡಿ 1988ರಲ್ಲಿ ಸಂಸತ್ತಿನಲ್ಲಿ ಅಂಗೀಕಾರಗೊಂಡು 1989ರಲ್ಲಿ ಜಾರಿಗೆ ಬಂದಿತು.

ಚುನಾವಣಾ ಆಯೋಗವು ಸಂವಿಧಾನಬದ್ಧ ಸ್ವಾಯತ್ತ ಸಂಸ್ಥೆಯಾಗಿದ್ದು, ಲೋಕಸಭೆ, ರಾಜ್ಯ ವಿಧಾನಸಭೆಗಳು ಹಾಗೂ ರಾಷ್ಟ್ರಪತಿ ಮತ್ತು ಉಪರಾಷ್ಟ್ರಪತಿ ಚುನಾವಣೆಗಳ ಮೇಲ್ವಿಚಾರಣೆ, ನಿರ್ದೇಶನ ಮತ್ತು ನಿಯಂತ್ರಣದ ಜವಾಬ್ದಾರಿಯನ್ನು ಹೊಂದಿದೆ.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ ಮಾತನಾಡಿದರು. ಮುಖಂಡರಾದ ಕೆ. ಕರಿಯಪ್ಪ, ಸಿದ್ರಾಮೇಶ ಮನ್ನಾಪುರ, ಯಂಕೋಬ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಾಗೂರ ಗ್ರಾಮ ರೈತ ಸಂಘ-ರೈತ ಸೇನೆಗೆ ನೂತನ ಪದಾಧಿಕಾರಿಗಳ ನೇಮಕ



ದೇವದುರ್ಗ: ರೈತರ ಹಿತಾಸಕ್ತಿ, ಅಭಿವೃದ್ಧಿ ಹಾಗೂ ಸ್ವಾಭಿಮಾನಿ ರೈತರ ಹಕ್ಕುಗಳ ರಕ್ಷಣೆಗಾಗಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆಯ ಬಾಗೂರ ಗ್ರಾಮ ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಸಂಘದ ರಾಜ್ಯಾಧ್ಯಕ್ಷ ಶಾಂತಗೌಡ ಬಿ. ಪಾಟೀಲ್ ಚನ್ನಪಟ್ಟಣ ಹಾಗೂ ರಾಜ್ಯ ಉಪಾಧ್ಯಕ್ಷ ಲಕ್ಷ್ಮೀಕಾಂತ್ ಎ. ಪಾಟೀಲ್ ಮದ್ದರಕಿ ಅವರ ಆದೇಶದ ಮೇರೆಗೆ, ಹಲವು ರೈತಪರ ಹೋರಾಟಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ರೈತರ ಅಭಿವೃದ್ಧಿಗಾಗಿ ಸೇವೆ ಸಲ್ಲಿಸಿರುವ ಸಮಾಜ ಸೇವಕ ಸಿದ್ದನಗೌಡ ಮಾಲಿ ಪಾಟೀಲ್ ಅವರನ್ನು ಗ್ರಾಮ ಘಟಕದ ಗೌರವಾಧ್ಯಕ್ಷರಾಗಿ ಹಾಗೂ ಹನುಮಂತ ಪೂಜಾರಿ ಅವರನ್ನು ಅಧ್ಯಕ್ಷರಾಗಿ ನೇಮಕ ಮಾಡಲಾಗಿದೆ.

ಈ ವೇಳೆ ರಾಜ್ಯ ಉಪಾಧ್ಯಕ್ಷ ಲಕ್ಷ್ಮೀಕಾಂತ್ ಎ. ಪಾಟೀಲ್ ಮದ್ದರಕಿ ಮಾತನಾಡಿ, ನೂತನ ಪದಾಧಿಕಾರಿಗಳು ತಮಗೆ ವಹಿಸಿರುವ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು. ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಗುರುತಿಸಿ, ಅವುಗಳ ಪರಿಹಾರಕ್ಕಾಗಿ ನ್ಯಾಯಬದ್ಧ ಹಾಗೂ ಸಂವಿಧಾನಬದ್ಧ ಮಾರ್ಗದಲ್ಲಿ ಹೋರಾಟ ನಡೆಸಬೇಕು. ಸ್ವಾಭಿಮಾನಿ ರೈತರ ಹಕ್ಕುಗಳನ್ನು ರಕ್ಷಿಸುವುದರೊಂದಿಗೆ ಸಂಘಟನೆಯನ್ನು ಗ್ರಾಮಮಟ್ಟದಿಂದ ಮತ್ತಷ್ಟು ಬಲಪಡಿಸಲು ಶ್ರಮಿಸಬೇಕು ಎಂದು ಕರೆ ನೀಡಿದರು.

ರೈತರ ಸಮಸ್ಯೆಗಳಿಗೆ ಸ್ಪಂದಿಸಿ, ಸರ್ಕಾರದ ಸೌಲಭ್ಯಗಳು ಅರ್ಹ ರೈತರಿಗೆ ತಲುಪುವಂತೆ ಜಾಗೃತಿ ಮೂಡಿಸುವುದರ ಜೊತೆಗೆ ರೈತರ ಪರ ಧ್ವನಿಯಾಗಿ ಸಂಘಟನೆ ಕಾರ್ಯನಿರ್ವಹಿಸಬೇಕು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಇಂದ್ರಜೀತ್ ಯಾದವ್, ಜಿಲ್ಲಾ ಗೌರವಾಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಹೋತಪೇಟ, ಜಿಲ್ಲಾ ಸಂಚಾಲಕ ಕ್ರಾಂತಿಕುಮಾರ್ ರಾಯಚೂರ್ಕರ್, ತಾಲೂಕು ಅಧ್ಯಕ್ಷ ಮಹಾದೇವ್ ಯಾದವ್, ಸಂಘಟನಾ ಕಾರ್ಯದರ್ಶಿ ಚನ್ನಬಸವ ನಾಯಕ, ಮಹೇಶ್ ಮಂಡಗಳ್ಳಿ, ವಿರುಪಾಕ್ಷಿ ಶೆಟ್ಟಿ, ಡ್ಯಾನಿ ಯಾದಗೀರ, ಸುರಪುರ ತಾಲೂಕು ಅಧ್ಯಕ್ಷ ವಿಜಯರಾಜ ಅರಕೇರಾ, ತಾಲೂಕು ಅಧ್ಯಕ್ಷ ಸೋಮನಾಥ ಪೂಜಾರಿ, ಸುರಪುರ ತಾಲೂಕು ಉಪಾಧ್ಯಕ್ಷ ದೇವರಾಜ್ ಎಸ್. ಬಡಿಗೇರ, ಮುಕ್ಕನಾಳ ಗ್ರಾಮ ಘಟಕ ಅಧ್ಯಕ್ಷ ದೇವಪ್ಪ ಬಂಡಿ, ನಾಗಣ್ಣ ಪೂಜಾರಿ, ಶಿವಪ್ಪ ತಳವಾರ, ಬೊಮ್ಮನಳ್ಳಿ ಗ್ರಾಮ ಘಟಕ ಅಧ್ಯಕ್ಷ ಶಂಕ್ರಗೌಡ, ಸೋಮನಾಥ ಬನದೊಡ್ಡಿ, ನಾಗರಾಜ, ಭೀಮಣ್ಣ, ಚಂದಪ್ಪ ಕಕ್ಕೇರಾ, ರಾಮಣ್ಣ ನಾಯಕ ಮಸರಕಲ್, ರಂಗಪ್ಪ ಗೋಸಲ್, ಅಂಬರೇಶ ಮುಂಡರಗಿ, ಮುದಕಪ್ಪ, ಕರಿಯಪ್ಪ ಸೇರಿದಂತೆ ಹಲವಾರು ರೈತರು ಉಪಸ್ಥಿತರಿದ್ದರು.

# ಪೌಷ್ಟಿಕ ಆಹಾರ ಸೇವನೆಯಿಂದ ತಾಯಿ-ಮಗುವಿನ ಆರೋಗ್ಯ ರಕ್ಷಣೆ: ಅರವಿಂದ ಕುಮಾರ



ರಾಯಚೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಯಚೂರು ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಹಾಗೂ ಗಾಣದಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ನಡುಗಡ್ಡೆ ಮಲಕಾಪುರ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ನಿಮ್ಮ ಆರೋಗ್ಯ ಊಟದ ತಟ್ಟೆಯಲ್ಲಿ ಎಂಬ ಸಂದೇಶದೊಂದಿಗೆ ಗ್ರಾಮ ಆರೋಗ್ಯ ಮತ್ತು ಪೌಷ್ಟಿಕ ಆಹಾರ ದಿನವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮದ ಗರ್ಭಿಣಿಯರು ಹಾಗೂ ಬಾಣಂತಿಯರು ಭಾಗವಹಿಸಿದ್ದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದ ಕುಮಾರ ಮಾತನಾಡಿ, ಗರ್ಭಾವಸ್ಥೆಯಲ್ಲಿ ಪೌಷ್ಟಿಕ ಮತ್ತು ಸಮತೋಲಿತ ಆಹಾರ ಸೇವಿಸುವುದರಿಂದ ತಾಯಿ ಹಾಗೂ ಮಗುವಿನ ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಳ್ಳಬಹುದು. ಪೌಷ್ಟಿಕ ಆಹಾರದ ಕೊರತೆಯಿಂದ ಉಂಟಾಗಬಹುದಾದ ಆರೋಗ್ಯ ಸಮಸ್ಯೆಗಳನ್ನು ತಡೆಯಲು ಆಹಾರ ಪದ್ಧತಿಯ ಬಗ್ಗೆ ವಿಶೇಷ ಗಮನ ಹರಿಸಬೇಕು ಎಂದು ತಿಳಿಸಿದರು.

ಆಹಾರದಲ್ಲಿ ಪ್ರೋಟೀನ್, ವಿಟಮಿನ್, ಖನಿಜಾಂಶ, ಕಾರ್ಬೋಹೈಡ್ರೇಟ್ ಹಾಗೂ ಅಗತ್ಯ ಕೊಬ್ಬಿನಾಂಶ ಇರುವಂತೆ ನೋಡಿಕೊಳ್ಳಬೇಕು. ಹಸಿರು ತರಕಾರಿ, ಹಣ್ಣು, ಮೊಟ್ಟೆ, ಮೀನು, ಮೊಳಕೆ ಕಾಳುಗಳು, ತುಪ್ಪ ಮತ್ತು ಬೆಲ್ಲ ಸೇರಿದಂತೆ ಪೌಷ್ಟಿಕಾಂಶಯುಕ್ತ ಆಹಾರಗಳನ್ನು ಸೇವಿಸಬೇಕು ಎಂದು ಸಲಹೆ ನೀಡಿದರು.

ಸ್ವಚ್ಛ ಅಡುಗೆಮನೆ ಆರೋಗ್ಯ ರಕ್ಷಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ತರಕಾರಿಗಳನ್ನು ಸ್ವಚ್ಛವಾಗಿ ತೊಳೆದು ಬಳಸಬೇಕು, ಅಡುಗೆಯಲ್ಲಿ ಅಯೋಡಿನ್‌ಯುಕ್ತ ಉಪ್ಪು ಉಪಯೋಗಿಸಬೇಕು. ಗರ್ಭಿಣಿ ಮತ್ತು ಬಾಣಂತಿಯರು ವೈದ್ಯಕೀಯ ಸಲಹೆಯಂತೆ ಕ್ಯಾಲ್ಸಿಯಂ ಹಾಗೂ ಕಬ್ಬಿಣಾಂಶದ ಮಾತ್ರೆಗಳನ್ನು ಸೇವಿಸಿ, ಆರೋಗ್ಯ ಉಪಕೇಂದ್ರದಲ್ಲಿ ದೊರೆಯುವ ಸೇವೆಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಬೂದೇಮ್ಮ ಮಾತನಾಡಿ, ಗರ್ಭಿಣಿಯರು ಪ್ರತಿ ತಿಂಗಳು ತಪ್ಪದೆ ಆರೋಗ್ಯ ತಪಾಸಣೆಗೆ ಒಳಗಾಗಬೇಕು. ಸಾಧ್ಯವಾದಷ್ಟು ಮನೆಯಲ್ಲೇ ತಯಾರಿಸಿದ ಪೌಷ್ಟಿಕ ಆಹಾರ ಸೇವಿಸಿ, ಬೇಕರಿ ಪದಾರ್ಥ ಹಾಗೂ ಜಂಕ್ ಫುಡ್ ಸೇವನೆಯನ್ನು ಕಡಿಮೆ ಮಾಡಬೇಕು. ಗರ್ಭಾವಸ್ಥೆಯಲ್ಲಿ ವೈಯಕ್ತಿಕ ಸ್ವಚ್ಛತೆಗೂ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಬಾಣಂತಿಯರು ಕುಟುಂಬ ಯೋಜನೆಯ ಸೂಕ್ತ ವಿಧಾನಗಳನ್ನು ಅಳವಡಿಸಿಕೊಂಡು ಮಕ್ಕಳ ನಡುವೆ ಕನಿಷ್ಠ ಮೂರು ವರ್ಷಗಳ ಅಂತರ ಕಾಪಾಡಿಕೊಳ್ಳಬೇಕು. ಇದರಿಂದ ತಾಯಿ ಮತ್ತು ಮಗುವಿನ ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಅಂಗನವಾಡಿ ಕಾರ್ಯಕರ್ತೆ ತಿರುಮಲಮ್ಮ ಅವರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ದೊರೆಯುವ ವಿವಿಧ ಸೇವೆಗಳ ಕುರಿತು ಮಾಹಿತಿ ನೀಡಿದರು. ಆಶಾ ಕಾರ್ಯಕರ್ತೆ ಹಸೀನಾ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಜೇಸ್ಕಾಂ ನಗದು ರಸೀದಿ ಪುಸ್ತಕ ದುರ್ಬಳಕೆ ಆರೋಪ: ಸಮಗ್ರ ತನಿಖೆಗೆ ಆಗ್ರಹ




ರಾಯಚೂರು: ಮಾನ್ವಿ ಉಪವಿಭಾಗದಲ್ಲಿ ಜೇಸ್ಕಾಂನ ನಗದು ರಸೀದಿ ಪುಸ್ತಕವನ್ನು ದುರ್ಬಳಕೆ ಮಾಡಿಕೊಂಡು ನಿಗಮಕ್ಕೆ ₹2 ಲಕ್ಷಕ್ಕೂ ಅಧಿಕ ಆರ್ಥಿಕ ನಷ್ಟ ಉಂಟುಮಾಡಲಾಗಿದೆ ಎಂಬ ಆರೋಪದ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರೆಂದು ಕಂಡುಬರುವ ನೌಕರರು ಮತ್ತು ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಜಯ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷೆ ಅಮೃತಾ ಒತ್ತಾಯಿಸಿದ್ದಾರೆ.

ಈ ಕುರಿತು ಗ್ರಾಮೀಣ ವಿಭಾಗದ ಮುಖ್ಯ ಕಾರ್ಯನಿರ್ವಾಹಕ ಅಭಿಯಂತರರಿಗೆ ಸೆ.25ರಂದು ಮನವಿ ಸಲ್ಲಿಸಿರುವ ಅವರು, ಮಾನ್ವಿ ಉಪವಿಭಾಗಕ್ಕೆ ಸಂಬಂಧಿಸಿದ ಎಚ್‌ಎ 06/14 ಸಂಖ್ಯೆಯ ನಗದು ರಸೀದಿ ಪುಸ್ತಕವನ್ನು ಮೆಕ್ಯಾನಿಕ್ ದರ್ಜೆ-2 ನೌಕರ ಗುರುರಾಜ ನಾಯಕ ಅವರು 2026ರ ಮಾರ್ಚ್ ಮತ್ತು ಏಪ್ರಿಲ್ ತಿಂಗಳಲ್ಲಿ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಮನವಿಯಲ್ಲಿ ಆರೋಪಿಸಿದ್ದಾರೆ.

ರಸೀದಿ ಪುಸ್ತಕದ ಮೂಲಕ ಸಂಗ್ರಹಿಸಿದ ಲಕ್ಷಾಂತರ ರೂಪಾಯಿ ಹಣವನ್ನು ನಿಗಮಕ್ಕೆ ಪಾವತಿಸದೆ ದುರ್ಬಳಕೆ ಮಾಡಲಾಗಿದೆ ಹಾಗೂ ರಸೀದಿ ಪುಸ್ತಕವನ್ನು ಹಿಂದಿರುಗಿಸದೆ ತಮ್ಮ ಬಳಿಯೇ ಇಟ್ಟುಕೊಳ್ಳಲಾಗಿದೆ ಎಂಬ ಆರೋಪವನ್ನೂ ಮಾಡಲಾಗಿದೆ. ಒಂದು ವೇಳೆ ರಸೀದಿ ಪುಸ್ತಕವನ್ನು ಹಿಂದಿರುಗಿಸಿದ್ದರೆ, ಅದರಲ್ಲಿನ ದಿನಾಂಕಗಳಲ್ಲಿ ಬದಲಾವಣೆ ಮಾಡಲಾಗಿದೆಯೇ ಎಂಬುದನ್ನೂ ತನಿಖೆಯ ವೇಳೆ ಪರಿಶೀಲಿಸಬೇಕು ಎಂದು ಒತ್ತಾಯಿಸಿದ್ದಾರೆ.

ಪ್ರಕರಣದ ವಿಷಯ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ಬಂದಿದ್ದರೂ ಸೂಕ್ತ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಲಾಗಿದೆ. ಇದರಿಂದ ನಿಗಮಕ್ಕೆ ಆರ್ಥಿಕ ನಷ್ಟ ಉಂಟಾಗಲು ಅಧಿಕಾರಿಗಳ ನಿರ್ಲಕ್ಷ್ಯವೂ ಕಾರಣವಾಗಿದೆಯೇ ಎಂಬುದನ್ನು ತನಿಖೆಗೆ ಒಳಪಡಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ನಗದು ರಸೀದಿ ಪುಸ್ತಕ, ಹಣ ಸಂಗ್ರಹ ಹಾಗೂ ನಿಗಮಕ್ಕೆ ಜಮಾ ಮಾಡಿರುವ ವಿವರ ಸೇರಿದಂತೆ ಸಂಬಂಧಿಸಿದ ಎಲ್ಲ ದಾಖಲೆಗಳನ್ನು ಕೂಲಂಕುಶವಾಗಿ ಪರಿಶೀಲಿಸಬೇಕು. ಆರೋಪಗಳು ಸತ್ಯವೆಂದು ದೃಢಪಟ್ಟಲ್ಲಿ ಸಂಬಂಧಿಸಿದ ನೌಕರರು ಹಾಗೂ ಅಧಿಕಾರಿಗಳ ವಿರುದ್ಧ ಕಾನೂನು ಮತ್ತು ಇಲಾಖಾ ನಿಯಮಗಳ ಅನ್ವಯ ಕಠಿಣ ಕ್ರಮ ಜರುಗಿಸಬೇಕು ಎಂದು ಅಮೃತಾ ಒತ್ತಾಯಿಸಿದ್ದಾರೆ.

# ವಿದ್ಯಾರ್ಥಿಗಳ ಉದ್ಯೋಗ ಕೌಶಲ್ಯ ವೃದ್ಧಿಗೆ ಮೂರು ದಿನಗಳ ತರಬೇತಿ




ರಾಯಚೂರು: ತಾರಾನಾಥ ಶಿಕ್ಷಣ ಸಂಸ್ಥೆಯ ಲಕ್ಷ್ಮೀ ವೆಂಕಟೇಶ ದೇಸಾಯಿ ಕಾಲೇಜಿನ ಗಣಕಯಂತ್ರ ವಿಭಾಗ ಹಾಗೂ ಐಕ್ಯೂಎಸಿ ಘಟಕದ ವತಿಯಿಂದ ವಿದ್ಯಾರ್ಥಿಗಳ ಜ್ಞಾನ ಮತ್ತು ಕೌಶಲ್ಯ ವೃದ್ಧಿಸುವ ಉದ್ದೇಶದಿಂದ ಐಬಿಎಂ ಸ್ಕಿಲ್ಸ್‌ಬಿಲ್ಡ್ ನೇತೃತ್ವದಲ್ಲಿ ಮೂರು ದಿನಗಳ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವನ್ನು ಸೆ.29ರಿಂದ ಅ.1ರವರೆಗೆ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಮಾನವ ಸಂಪನ್ಮೂಲ ತರಬೇತುದಾರ ಹಾಗೂ ಉದ್ಯೋಗ ಸಲಹೆಗಾರ ಇಂಜರಪು ಹರಿ ಬಾಬು ಅವರು ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಒಟ್ಟು 30 ಗಂಟೆಗಳ ತರಬೇತಿ ನೀಡಲಾಗುತ್ತಿದೆ. ಇದರಲ್ಲಿ 16 ಗಂಟೆಗಳ ಆನ್‌ಲೈನ್ ಹಾಗೂ 14 ಗಂಟೆಗಳ ಆಫ್‌ಲೈನ್ ತರಗತಿಗಳು ಒಳಗೊಂಡಿದ್ದು, ವಿವಿಧ ಕಲಿಕಾ ಸಂಪನ್ಮೂಲಗಳು ಮತ್ತು ಕೌಶಲ್ಯಗಳ ಕುರಿತು ಪ್ರಾಯೋಗಿಕ ಜ್ಞಾನ ನೀಡಲಾಗುತ್ತಿದೆ ಎಂದು ತಿಳಿಸಿದರು.

ಇಂತಹ ತರಬೇತಿಗಳು ವಿದ್ಯಾರ್ಥಿಗಳ ಜ್ಞಾನ ಹಾಗೂ ತಾಂತ್ರಿಕ ಕೌಶಲ್ಯ ಹೆಚ್ಚಿಸಲು ಸಹಕಾರಿಯಾಗಲಿವೆ. ವಿಶೇಷವಾಗಿ ಡೇಟಾ ವಿಶ್ಲೇಷಣೆಗೆ ಸಂಬಂಧಿಸಿದ ಕಾರ್ಯಗಳನ್ನು ಸುಲಭ ಹಾಗೂ ಪರಿಣಾಮಕಾರಿಯಾಗಿ ನಿರ್ವಹಿಸುವ ಕೌಶಲ್ಯ ಬೆಳೆಸಿಕೊಳ್ಳಲು ನೆರವಾಗಲಿವೆ. ಉದ್ಯೋಗ ಕ್ಷೇತ್ರದ ಅಗತ್ಯಗಳಿಗೆ ಅನುಗುಣವಾದ ಕೌಶಲ್ಯಗಳನ್ನು ವಿದ್ಯಾರ್ಥಿಗಳು ಈಗಿನಿಂದಲೇ ರೂಢಿಸಿಕೊಂಡರೆ ಭವಿಷ್ಯದಲ್ಲಿ ವಿವಿಧ ಕಂಪನಿಗಳಲ್ಲಿ ಉದ್ಯೋಗಾವಕಾಶಗಳನ್ನು ಪಡೆಯಲು ಅನುಕೂಲವಾಗಲಿದೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕಾಲೇಜಿನ ಉಪ ಪ್ರಾಂಶುಪಾಲ ಹಾಗೂ ಐಕ್ಯೂಎಸಿ ಘಟಕದ ಸಂಯೋಜಕ ಡಾ. ಚಕ್ರಧರ ಬಿ. ಮಾತನಾಡಿ, ವಿದ್ಯಾರ್ಥಿಗಳಲ್ಲಿ ಹೊಸ ಕೌಶಲ್ಯಗಳನ್ನು ಬೆಳೆಸುವುದರೊಂದಿಗೆ ಅವರ ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದು ಹಾಗೂ ಕೈಗಾರಿಕಾ ಕ್ಷೇತ್ರದ ಅಗತ್ಯಗಳಿಗೆ ತಕ್ಕಂತೆ ಸಿದ್ಧಪಡಿಸುವಲ್ಲಿ ಇಂತಹ ತರಬೇತಿ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದರು.

ಕಾರ್ಯಕ್ರಮದಲ್ಲಿ ಗಣಕಯಂತ್ರ ವಿಭಾಗದ ಮುಖ್ಯಸ್ಥೆ ಡಾ. ಪದ್ಮಾವತಿ, ಶ್ರೀಮತಿ ಸ್ವಾತಿ ದೀಕ್ಷಿತ್, ಅಬ್ದುಲ್ ಕರೀಂ, ಶಾಫಿಯಾ ಬೇಗಂ, ಹೇಮಾವತಿ, ರುಹಿ ಫಾತಿಮಾ, ಅರ್ಚನಾ, ಸುಷ್ಮಾ, ವೇದಶ್ರೀ ಹಾಗೂ ಗಣಕಯಂತ್ರ ವಿಭಾಗದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 500 ಮಹಿಳೆಯರಿಂದ ಸಾಮೂಹಿಕ ಗಾಯನಾಭ್ಯಾಸ



ರಾಯಚೂರು: ನಗರದ ಶ್ರೀ ರಾಘವೇಂದ್ರ ಸ್ವಾಮಿ ಶ್ರೀಮಠದ ಆವರಣದಲ್ಲಿ ಅ.3 ಮತ್ತು 4ರಂದು ನಡೆಯಲಿರುವ ಗೋವಿಂದ ಗಾನ ಕಾರ್ಯಕ್ರಮದ ಪೂರ್ವಭಾವಿಯಾಗಿ ಸುಮಾರು 500 ಮಹಿಳೆಯರಿಗೆ ಸಾಮೂಹಿಕ ಗಾಯನದ ತರಬೇತಿ ಹಾಗೂ ಅಭ್ಯಾಸ ಕಾರ್ಯಕ್ರಮವನ್ನು ಅಂತಾರಾಷ್ಟ್ರೀಯ ಮಟ್ಟದ ದಾಸವಾಣಿ ಗಾಯಕ



ರಾಯಚೂರು ಶೇಷಗಿರಿ ದಾಸ ಅವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಯಿತು.

ಪ್ರತಿವರ್ಷದ ಸಂಪ್ರದಾಯದಂತೆ ಆಯೋಜಿಸಲಾಗುವ ಗೋವಿಂದ ಗಾನ ಕಾರ್ಯಕ್ರಮದಲ್ಲಿ ಮಹಿಳೆಯರು ಶ್ರುತಿ, ಲಯ ಹಾಗೂ ತಾಳಬದ್ಧವಾಗಿ ಸಾಮೂಹಿಕ ಗಾಯನ ನಡೆಸುವ ಹಿನ್ನೆಲೆಯಲ್ಲಿ ಈ ಪೂರ್ವಭಾವಿ ಅಭ್ಯಾಸವನ್ನು ಆಯೋಜಿಸಲಾಗಿತ್ತು.

ಜವಾಹರ ನಗರದ ಶ್ರೀಮಠದ ಮಠಾಧಿಕಾರಿ ಆನಂದ ಆಚಾರ ಅವರು ಗೋವಿಂದ ದಾಸರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ದೀಪ ಬೆಳಗಿಸುವ ಮೂಲಕ 500 ಮಹಿಳೆಯರ ಸಾಮೂಹಿಕ ಗಾಯನದ ತರಬೇತಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಯಚೂರಿನ ಅಸ್ಕಿಹಾಳ ಗ್ರಾಮದ ಗೋವಿಂದ ದಾಸರು ಸರ್ವ ಸಮುದಾಯದ ಜನರನ್ನು ಒಗ್ಗೂಡಿಸಿ ಶ್ರೀಹರಿಯ ನಾಮಸ್ಮರಣೆಯ ಮಹತ್ವವನ್ನು ಸಾರಿದವರು. ಅವರ ಪರಂಪರೆಯವರಾದ ರಾಯಚೂರು ಶೇಷಗಿರಿ ದಾಸ ಅವರು ದಾಸ ಸಾಹಿತ್ಯ ಮತ್ತು ದಾಸವಾಣಿಯನ್ನು ಹೆಚ್ಚಿನ ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯ ಎಂದರು.

ಅಂತಾರಾಷ್ಟ್ರೀಯ ಮಟ್ಟದಲ್ಲಿ ದಾಸವಾಣಿ ಗಾಯನದ ಮೂಲಕ ಗುರುತಿಸಿಕೊಂಡಿರುವ ಶೇಷಗಿರಿ ದಾಸ ಅವರು ನೂರಾರು ಮಹಿಳೆಯರೊಂದಿಗೆ ಕುಳಿತು ಗಾಯನದ ಅಭ್ಯಾಸ ಮಾಡಿಸುತ್ತಿರುವುದು ಅವರ ಸರಳತೆ ಹಾಗೂ ದಾಸ ಸಾಹಿತ್ಯದ ಮೇಲಿನ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಬಳಿಕರಾಯಚೂರುಶೇಷಗಿರಿದಾಸಅವರುಅ.3 ಮತ್ತು 4ರಂದು ನಡೆಯಲಿರುವ ಕಾರ್ಯಕ್ರಮದಲ್ಲಿ ಹಾಡಬೇಕಾದ ಗೀತೆಗಳನ್ನು ಮಹಿಳೆಯರಿಗೆ ಅಭ್ಯಾಸ ಮಾಡಿಸಿದರು. ಹಾಡುಗಳನ್ನು ಯಾವ ರೀತಿಯಲ್ಲಿ ಪ್ರಸ್ತುತಪಡಿಸಬೇಕು, ಶ್ರುತಿ, ಲಯ ಮತ್ತು ತಾಳದ ಹೊಂದಾಣಿಕೆ ಹೇಗಿರಬೇಕು ಹಾಗೂ 500 ಮಹಿಳೆಯರ ಧ್ವನಿ ಸಾಮೂಹಿಕ ಗಾಯನದಲ್ಲಿ ಏಕರೂಪವಾಗಿ ಮೂಡಿಬರಲು ಅನುಸರಿಸಬೇಕಾದ ವಿಧಾನಗಳ ಕುರಿತು ವಿವರವಾಗಿ ತರಬೇತಿ ನೀಡಿದರು. ತಾವೂ ಜೊತೆಯಲ್ಲಿ ಹಾಡುವ ಮೂಲಕ ಪ್ರಾಯೋಗಿಕವಾಗಿ ಮಾರ್ಗದರ್ಶನ ಮಾಡಿದರು.

ಸುಮಾರು 500 ಮಹಿಳೆಯರು ಏಕಕಾಲದಲ್ಲಿ ಗಾಯನಾಭ್ಯಾಸದಲ್ಲಿ ಪಾಲ್ಗೊಂಡಿದ್ದರಿಂದ ಶ್ರೀಮಠದ ಆವರಣ ಭಕ್ತಿ ಮತ್ತು ದಾಸವಾಣಿಯ ನಾದದಿಂದ ಕಂಗೊಳಿಸಿತು. ಈ ಪೂರ್ವಭಾವಿ ತರಬೇತಿಯೊಂದಿಗೆ ಅ.3 ಮತ್ತು 4ರಂದು ನಡೆಯಲಿರುವ ಗೋವಿಂದ ಗಾನ ಕಾರ್ಯಕ್ರಮಕ್ಕೆ ಸಿದ್ಧತೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಮುರಳೀಧರ ಕುಲಕರ್ಣಿ, ಸುರೇಶ್ ಕಲ್ಲೂರು, ಜಯಕುಮಾರ ದೇಸಾಯಿ ಕಾಡ್ಲೂರು, ವೆಂಕಟೇಶ ಕೋಲಾರ, ವೆಂಕೋಬ ಆಚಾರ, ರವೀಂದ್ರ ಕುಲಕರ್ಣಿ, ಪ್ರಸನ್ನ ಆಲಂಪಲ್ಲಿ, ವೇಣುಗೋಪಾಲ್, ವರಪ್ ಕುಲಕರ್ಣಿ ಸೇರಿದಂತೆ ವಿವಿಧ ಮಹಿಳಾ ಭಜನಾ ಮಂಡಳಿಗಳ ಸದಸ್ಯರು ಹಾಗೂ ಭಕ್ತರು ಭಾಗವಹಿಸಿದ್ದರು.

# 75 ವಸಂತಗಳ ಸಾಧಕಿ ದಾನಮ್ಮ ಸುಭಾಷ್ಚಂದ್ರರಿಗೆ ರಾಜ್ಯಮಟ್ಟದ ಅಭಿನಂದನಾ ಪ್ರಶಸ್ತಿ



ರಾಯಚೂರು: ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕರ ಸಂಘದ ವತಿಯಿಂದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿರುವ ಶಿಕ್ಷಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ 75 ವಸಂತಗಳನ್ನು ಪೂರೈಸಿರುವ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕಿ ಶ್ರೀಮತಿ ದಾನಮ್ಮ ಸುಭಾಷ್ಚಂದ್ರ ಅವರು ರಾಜ್ಯಮಟ್ಟದ ಅಭಿನಂದನಾ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಸೆ.30ರಂದು ಬೆಂಗಳೂರಿನಲ್ಲಿ ನಡೆಯಲಿರುವ ಸಮಾರಂಭದಲ್ಲಿ ರಾಜ್ಯಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನದ ಜೊತೆಗೆ, 75 ವರ್ಷಗಳನ್ನು ಪೂರೈಸಿರುವ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಸಾಧಕ ಶಿಕ್ಷಕರನ್ನು ಅಭಿನಂದಿಸಲಾಗುತ್ತಿದ್ದು, ಈ ಸಾಲಿನಲ್ಲಿ ದಾನಮ್ಮ ಸುಭಾಷ್ಚಂದ್ರ ಅವರನ್ನು ವಿಶೇಷವಾಗಿ ಗೌರವಿಸಲಾಗುತ್ತಿದೆ.

ಶಿಕ್ಷಕ ವೃತ್ತಿಯಲ್ಲಿ ದಕ್ಷತೆ, ಪ್ರಾಮಾಣಿಕತೆ, ನಿಷ್ಠೆ ಹಾಗೂ ಕಾಯಕಪ್ರಜ್ಞೆಯನ್ನು ಮೈಗೂಡಿಸಿಕೊಂಡು ಸೇವೆ ಸಲ್ಲಿಸಿರುವ ದಾನಮ್ಮ ಸುಭಾಷ್ಚಂದ್ರ ಅವರು ತಮ್ಮ ವೃತ್ತಿಜೀವನದಲ್ಲಿ ಎದುರಾದ ಸಮಸ್ಯೆಗಳಿಗೆ ಎದೆಗುಂದದೆ ಪರಿಹಾರ ಕಂಡುಕೊಳ್ಳುವ ಮೂಲಕ ಶಿಕ್ಷಕ ಸಮುದಾಯಕ್ಕೆ ಮಾದರಿಯಾಗಿದ್ದಾರೆ. ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಯೊಂದಿಗೆ ಅವರ ವ್ಯಕ್ತಿತ್ವ ರೂಪಿಸುವ ಕಾರ್ಯದಲ್ಲಿಯೂ ತಮ್ಮದೇ ಆದ ಕೊಡುಗೆ ನೀಡಿದ್ದಾರೆ.

ಅವರ ಶೈಕ್ಷಣಿಕ ಸೇವೆಯನ್ನು ಗುರುತಿಸಿ ಈ ಹಿಂದೆ ರಾಷ್ಟ್ರಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಗಿದ್ದು, ಅಂದಿನ ರಾಷ್ಟ್ರಪತಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರಿಂದ ಪ್ರಶಸ್ತಿ ಸ್ವೀಕರಿಸಿರುವುದು ಅವರ ವೃತ್ತಿಜೀವನದ ಪ್ರಮುಖ ಸಾಧನೆಯಾಗಿದೆ.

ನಿವೃತ್ತಿಯ ನಂತರವೂ ದಾನಮ್ಮ ಸುಭಾಷ್ಚಂದ್ರ ಅವರು ಸಾಮಾಜಿಕ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಸಾಹಿತ್ಯಿಕ ಚಟುವಟಿಕೆಗಳಿಂದ ದೂರ ಉಳಿಯದೆ ನಿರಂತರವಾಗಿ ತೊಡಗಿಸಿಕೊಂಡಿದ್ದಾರೆ. ವಿವಿಧ ಕಾರ್ಯಕ್ರಮಗಳಿಗೆ ಸೂಕ್ತ ಸಲಹೆ, ಸೂಚನೆ ಹಾಗೂ ಮಾರ್ಗದರ್ಶನ ನೀಡುತ್ತಾ ಸಮಾಜಮುಖಿ ಚಟುವಟಿಕೆಗಳಿಗೆ ಬೆನ್ನೆಲುಬಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

75 ವಸಂತಗಳನ್ನು ಪೂರೈಸಿದ್ದರೂ ಅವರಲ್ಲಿರುವ ಉತ್ಸಾಹ, ಕ್ರಿಯಾಶೀಲತೆ ಹಾಗೂ ಸೇವಾ ಮನೋಭಾವ ಯುವಪೀಳಿಗೆಗೂ ಪ್ರೇರಣೆಯಾಗಿದೆ. ರಾಜ್ಯಮಟ್ಟದ ಅಭಿನಂದನಾ ಪ್ರಶಸ್ತಿಗೆ ಆಯ್ಕೆಯಾಗಿರುವ ದಾನಮ್ಮ ಸುಭಾಷ್ಚಂದ್ರ ಅವರಿಗೆ ಅವರ ಅಭಿಮಾನಿಗಳು, ಶಿಷ್ಯ ಬಳಗ, ಆಪ್ತರು, ಕುಟುಂಬಸ್ಥರು ಹಾಗೂ ಬಂಧುಗಳು ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ.

# ಮಾದರಿ ನೀತಿ ಸಂಹಿತೆ ಉಲ್ಲಂಘಿಸಿದಲ್ಲಿ ಲಿಖಿತವಾಗಿ, ದೂರವಾಣಿ ಮುಖಾಂತರ ದೂರುಗಳನ್ನು ನೀಡಲು ದೂರ ಮೇಲ್ವಿಚಾರಣಾ ಕೋಶ ಪ್ರಾರಂಭ: ಜಹೀರಾ ನಸ್ಸೀಂ



ರಾಯಚೂರು ಸೆ. 29 (ಕರ್ನಾಟಕ ವಾರ್ತೆ): ಭಾರತ ಚುನಾವಣಾ ಆಯೋಗವು ದಿನಾಂಕ:22.09.2026 ರಂದು ಕರ್ನಾಟಕ ವಿಧಾನ ಪರಿಷತ್ತ ಈಶಾನ್ಯ ಶಿಕ್ಷಕರ ಕ್ಷೇತ್ರ ಚುನಾವಣೆಯನ್ನು ಘೋಷಿಸಿ ವೇಳಾಪಟ್ಟಿಯನ್ನು ಹೊರಡಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಚುನಾವಣೆಯ ಮಾದರಿ ನೀತಿ ಸಂಹಿತೆ ಹಾಗೂ ಮಾರ್ಗಸೂಚಿಗಳನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ಲಿಖಿತವಾಗಿ ಅಥವಾ ದೂರವಾಣಿ ಮುಖಾಂತರ ಸಾರ್ವಜನಿಕರು ದೂರುಗಳನ್ನು ನೀಡಲು ಅನುಕೂಲಕರವಾಗುಂತೆ ಈ ಕಾರ್ಯಾಲಯದಲ್ಲಿ ದೂರ ಮೇಲ್ವಿಚಾರಣಾ ಕೋಶವನ್ನು ತೆರೆಯಲಾಗಿದೆ ಎಂದು ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿಯಾಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸ್ಸೀಂ ಅವರು ತಿಳಿಸಿದ್ದಾರೆ.

ದೂರು ಸಲ್ಲಿಸ ಬಯಸುವವರು ದೂರವಾಣಿ ಸಂಖ್ಯೆ: 08472-200255ಗೆ ತಮ್ಮ ದೂರನ್ನು ಸಲ್ಲಿಸಬಹುದು. ಅಲ್ಲದೇ ಲಿಖಿತವಾಗಿಯು ಸಹ ಪ್ರಾದೇಶಿಕ ಆಯುಕ್ತರ ಕಾರ್ಯಾಲಯ, ಚುನಾವಣಾ ಶಾಖೆ, 2ನೇ ಮಹಡಿ, ಜಿಲ್ಲಾಡಳಿತ ಭವನ, ಸ್ಟೇಷನ್ ರಸ್ತೆ, ಕಲಬುರಗಿ 585102ಗೆ ಪತ್ರ ವ್ಯವಹರಿಸಬಹುದಾಗಿದೆ. ಈ ದೂರು ನಿರ್ವಹಣಾ ಕೋಶವು ದಿನದ 24 ಗಂಟೆ ಕಾರ್ಯನಿರ್ವಹಿಸಲಾಗುವುದೆಂದು ಅಧಿಸೂಚಿನೆಯಲ್ಲಿ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿಯಾಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು ತಿಳಿಸಿದ್ದಾರೆ.

# ಗ್ರಂಥಪಾಲಕರ ನೇಮಕಕ್ಕೆ ಆಗ್ರಹಿಸಿ ಅ.5ರಂದು ಬೆಂಗಳೂರಿನಲ್ಲಿ ಬೃಹತ್ ಹೋರಾಟ




ರಾಯಚೂರು: ಸರ್ಕಾರಿ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಕರ್ನಾಟಕ ಪಬ್ಲಿಕ್ ಶಾಲೆಗಳು, ಪ್ರೌಢಶಾಲೆಗಳು, ವಸತಿ ಶಾಲೆಗಳು, ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಗ್ರಂಥಪಾಲಕರ ಹುದ್ದೆಗಳನ್ನು ಭರ್ತಿ ಮಾಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಂಥಾಲಯ ಸಂಘದ ವತಿಯಿಂದ ಅಕ್ಟೋಬರ್ 5ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಒಂದು ದಿನದ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗಿದೆ.

ರಾಜ್ಯದ ವಿವಿಧ ಭಾಗಗಳ ಗ್ರಂಥಾಲಯ ಸಂಘದ ಪದಾಧಿಕಾರಿಗಳು, ವೃತ್ತಿನಿರತ ಗ್ರಂಥಪಾಲಕರು ಹಾಗೂ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಹೋರಾಟದಲ್ಲಿ ಭಾಗವಹಿಸಲಿದ್ದಾರೆ ಎಂದು ಸಂಘದ ಪ್ರಕಟಣೆ ತಿಳಿಸಿದೆ.

ಈ ಹೋರಾಟವು ಕೇವಲ ಗ್ರಂಥಪಾಲಕರ ಉದ್ಯೋಗ ಅಥವಾ ವೃತ್ತಿಪರ ಹಿತಾಸಕ್ತಿಗೆ ಸೀಮಿತವಾಗಿಲ್ಲ. ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವುದು, ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿ ಹಾಕುವುದು ಹಾಗೂ ಗ್ರಂಥಾಲಯಗಳನ್ನು ಬಲಪಡಿಸುವ ಮೂಲಕ ಸಮಾಜದ ಪ್ರತಿಯೊಬ್ಬರಿಗೂ ಜ್ಞಾನದ ಅವಕಾಶ ದೊರೆಯುವಂತೆ ಮಾಡುವುದು ಹೋರಾಟದ ಪ್ರಮುಖ ಉದ್ದೇಶವಾಗಿದೆ ಎಂದು ಸಂಘ ತಿಳಿಸಿದೆ.

ಗ್ರಂಥಾಲಯವೆಂದರೆ ಕೇವಲ ಪುಸ್ತಕಗಳನ್ನು ಸಂಗ್ರಹಿಸಿ ಇಡುವ ಕೊಠಡಿಯಲ್ಲ. ವಿದ್ಯಾರ್ಥಿಗಳಲ್ಲಿ ಓದುವ ಹವ್ಯಾಸ ಬೆಳೆಸುವ, ಜ್ಞಾನ ವಿಸ್ತರಿಸುವ, ಪ್ರಶ್ನಿಸುವ ಮನೋಭಾವ ಮೂಡಿಸುವ ಹಾಗೂ ಸ್ವತಂತ್ರವಾಗಿ ಜ್ಞಾನವನ್ನು ಹುಡುಕುವ ಸಾಮರ್ಥ್ಯವನ್ನು ಬೆಳೆಸುವ ಜ್ಞಾನಮಂದಿರವಾಗಿದೆ. ಉತ್ತಮ ಗ್ರಂಥಾಲಯದಿಂದ ಸಾವಿರಾರು ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳಾಚೆಗಿನ ಜಗತ್ತನ್ನು ಅರಿಯುವ ಅವಕಾಶ ದೊರೆಯುತ್ತದೆ ಎಂದು ಸಂಘ ಅಭಿಪ್ರಾಯಪಟ್ಟಿದೆ.

ಇಂದಿನ ಡಿಜಿಟಲ್ ಯುಗದಲ್ಲಿ ವಿದ್ಯಾರ್ಥಿಗಳು ಮೊಬೈಲ್ ಹಾಗೂ ಇತರ ಎಲೆಕ್ಟ್ರಾನಿಕ್ ಸಾಧನಗಳತ್ತ ಹೆಚ್ಚು ಆಕರ್ಷಿತರಾಗುತ್ತಿರುವ ಸಂದರ್ಭದಲ್ಲಿ ಪುಸ್ತಕ ಓದುವ ಅಭ್ಯಾಸವನ್ನು ಬೆಳೆಸುವುದು ಅತ್ಯಂತ ಅಗತ್ಯವಾಗಿದೆ. ಪುಸ್ತಕ ಓದುವಿಕೆಯಿಂದ ಏಕಾಗ್ರತೆ, ಆಲೋಚನಾ ಶಕ್ತಿ ಹಾಗೂ ಸಮಯದ ಸದ್ಬಳಕೆಯಂತಹ ಉತ್ತಮ ಗುಣಗಳನ್ನು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ಆದರೆ ಸಮರ್ಥ ಗ್ರಂಥಪಾಲಕರಿಲ್ಲದೆ ಗ್ರಂಥಾಲಯದ ಸಂಪನ್ಮೂಲಗಳನ್ನು ವಿದ್ಯಾರ್ಥಿಗಳಿಗೆ ಪರಿಣಾಮಕಾರಿಯಾಗಿ ತಲುಪಿಸುವುದು ಕಷ್ಟವಾಗುತ್ತದೆ ಎಂದು ತಿಳಿಸಲಾಗಿದೆ.

"ಗ್ರಂಥಪಾಲಕರಿಲ್ಲದ ಗ್ರಂಥಾಲಯವು ಗುರು ಇಲ್ಲದ ಗುರುಕುಲದಂತಾಗುತ್ತದೆ" ಎಂಬ ಸಂದೇಶದೊಂದಿಗೆ ಖಾಲಿ ಇರುವ ಗ್ರಂಥಪಾಲಕರ ಹುದ್ದೆಗಳನ್ನು ಸರ್ಕಾರ ಶೀಘ್ರವಾಗಿ ಭರ್ತಿ ಮಾಡಬೇಕು ಎಂದು ಸಂಘ ಒತ್ತಾಯಿಸಿದೆ.

ಅಕ್ಟೋಬರ್ 5ರಂದು ನಡೆಯಲಿರುವ ಹೋರಾಟಕ್ಕೆ ಕನ್ನಡ ಸಾಹಿತಿಗಳು, ಶಿಕ್ಷಣ ಪ್ರೇಮಿಗಳು, ಓದುಗರು, ಗ್ರಂಥಾಲಯ ಮತ್ತು ಪುಸ್ತಕ ಪ್ರೇಮಿಗಳು ಬೆಂಬಲ ಸೂಚಿಸಬೇಕು. ಗ್ರಂಥಾಲಯಗಳನ್ನು ಬಲಪಡಿಸುವ ಹಾಗೂ ಗ್ರಂಥಪಾಲಕರ ನೇಮಕಾತಿಗಾಗಿ ನಡೆಯುತ್ತಿರುವ ಅಭಿಯಾನಕ್ಕೆ ಧ್ವನಿಗೂಡಿಸಿ ಹೋರಾಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಗ್ರಂಥಾಲಯ ಸಂಘ ಮನವಿ ಮಾಡಿದೆ.

# ಹುಟ್ಟುಹಬ್ಬದ ಸಂಭ್ರಮಕ್ಕೆ ಸಮಾಜ ಸೇವೆಯ ಸ್ಪರ್ಶ ನೀಡಿದ ಭಾಗ್ಯಶ್ರೀ



ಮಾನ್ವಿ: ಸಮಾಜ ಸೇವೆಗೆ ವಯಸ್ಸು ಅಡ್ಡಿಯಲ್ಲ ಎಂಬುದನ್ನು ತಮ್ಮ ಕಾರ್ಯಗಳ ಮೂಲಕ ತೋರಿಸುತ್ತಿರುವ ತಾಲೂಕಿನ ಜೀನೂರು ಗ್ರಾಮದ ಯುವ ವಿದ್ಯಾರ್ಥಿನಿ ಭಾಗ್ಯಶ್ರೀ, ಅನಾಥರು, ವೃದ್ಧರು, ದಿವ್ಯಾಂಗರು ಹಾಗೂ ಸಂಕಷ್ಟದಲ್ಲಿರುವ ನಿರ್ಗತಿಕರಿಗೆ ಕೈಲಾದ ನೆರವು ನೀಡುವ ಮೂಲಕ ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯುತ್ತಿದ್ದಾರೆ.

ನಾಳೆ (ಸೆ.30) ತಮ್ಮ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುತ್ತಿರುವ ಭಾಗ್ಯಶ್ರೀ, ಜನ್ಮದಿನವನ್ನು ಕೇವಲ ಸಂಭ್ರಮಕ್ಕೆ ಸೀಮಿತಗೊಳಿಸದೆ ಸಮಾಜ ಸೇವೆಯ ಸಂಕಲ್ಪವನ್ನು ಮತ್ತಷ್ಟು ಗಟ್ಟಿಗೊಳಿಸಿಕೊಳ್ಳುವ ದಿನವನ್ನಾಗಿ ಕಾಣುತ್ತಿರುವುದು ವಿಶೇಷವಾಗಿದೆ.

ಬೀದಿ ಬದಿಯಲ್ಲಿ ಆಶ್ರಯವಿಲ್ಲದೆ ಜೀವನ ನಡೆಸುತ್ತಿರುವ ಅನಾಥರು, ವೃದ್ಧರು, ದೃಷ್ಟಿಹೀನರು ಹಾಗೂ ಸಂಕಷ್ಟದಲ್ಲಿರುವವರಿಗೆ ಆಹಾರ ಮತ್ತು ಅಗತ್ಯ ವಸ್ತುಗಳನ್ನು ಒದಗಿಸುವುದರ ಜೊತೆಗೆ, ಅವರೊಂದಿಗೆ ಆತ್ಮೀಯವಾಗಿ ಮಾತನಾಡಿ ಧೈರ್ಯ ತುಂಬುವ ಕೆಲಸದಲ್ಲಿಯೂ ಭಾಗ್ಯಶ್ರೀ ತೊಡಗಿಸಿಕೊಂಡಿದ್ದಾರೆ. ಚಿಕ್ಕ ವಯಸ್ಸಿನಲ್ಲಿಯೇ ಇಂತಹ ಮಾನವೀಯ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವ ಅವರ ಸೇವಾ ಮನೋಭಾವ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

"ಸಮಾಜ ಸೇವೆಗೆ ನನ್ನ ತಂದೆ-ತಾಯಿಯೇ ಸ್ಫೂರ್ತಿ. ಅವರು ಕಲಿಸಿದ ಮಾನವೀಯ ಮೌಲ್ಯಗಳೇ ಈ ಕಾರ್ಯಕ್ಕೆ ನನ್ನನ್ನು ಪ್ರೇರೇಪಿಸಿವೆ. ನಾನು ಯಾವುದೇ ಜಾತಿ, ಧರ್ಮ ಅಥವಾ ರಾಜಕೀಯದ ಪರವಾಗಿ ಕೆಲಸ ಮಾಡುವುದಿಲ್ಲ. ಮಾನವೀಯತೆಯೇ ನನ್ನ ಧರ್ಮ; ಸಂಕಷ್ಟದಲ್ಲಿರುವವರಿಗೆ ನೆರವಾಗುವುದೇ ನನ್ನ ಗುರಿ" ಎಂದು ಭಾಗ್ಯಶ್ರೀ ತಿಳಿಸಿದರು.

"ನಾನು ಯಾವುದೇ ಧರ್ಮದ ಪ್ರಚಾರಕಿ ಅಲ್ಲ, ಮಾನವ ಧರ್ಮದ ಸೇವಕಿ. ಪ್ರೀತಿ, ಸಹಾಯ, ಸೌಹಾರ್ದತೆ, ಭ್ರಾತೃತ್ವ, ಪ್ರಾಮಾಣಿಕತೆ, ನ್ಯಾಯ, ತ್ಯಾಗ ಮತ್ತು ಔದಾರ್ಯವೇ ಸಮಾಜ ಸೇವೆಯ ನಿಜವಾದ ಮೌಲ್ಯಗಳು. ಇವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜ ಸೇವೆಯಲ್ಲಿ ತೊಡಗಿರುವುದೇ ನನಗೆ ನಿಜವಾದ ಸಂತೋಷ" ಎಂದು ಹೇಳಿದರು.

ಭಾಗ್ಯಶ್ರೀ ಅವರ ಸಮಾಜ ಸೇವೆಯ ಪಯಣ ಇನ್ನಷ್ಟು ವಿಸ್ತರಿಸಿ, ಹೆಚ್ಚಿನ ನಿರ್ಗತಿಕರು ಹಾಗೂ ಸಂಕಷ್ಟದಲ್ಲಿರುವವರಿಗೆ ಆಸರೆಯಾಗಲಿ ಎಂದು ಸಾರ್ವಜನಿಕರು ಹುಟ್ಟುಹಬ್ಬದ ಶುಭಾಶಯ ಕೋರಿದ್ದಾರೆ. ಜೀನೂರಿನ ಈ ಯುವ ವಿದ್ಯಾರ್ಥಿನಿಯ ಮಾನವೀಯ ಸೇವೆ ಇತರ ಯುವಜನರಿಗೂ ಪ್ರೇರಣೆಯಾಗುತ್ತಿದೆ.

# ಸತೀಶ ಜಾರಕಿಹೊಳಿ ವಿರುದ್ಧದ ಇಡಿ ದಾಳಿ ರಾಜಕೀಯ ಪ್ರೇರಿತ: ಶ್ರೀದೇವಿ ಆರ್. ನಾಯಕ



ದೇವದುರ್ಗ, ಸೆ.29: ಸಚಿವ ಸತೀಶ ಜಾರಕಿಹೊಳಿ ಅವರನ್ನು ರಾಜಕೀಯವಾಗಿ ತೇಜೋವಧೆ ಮಾಡುವ ಉದ್ದೇಶದಿಂದ ಜಾರಿ ನಿರ್ದೇಶನಾಲಯ (ಇಡಿ) ದಾಳಿ ನಡೆಸಿದೆ. ಇದು ರಾಜಕೀಯ ಪ್ರೇರಿತ ಕ್ರಮವಾಗಿದೆ ಎಂದು ರಾಷ್ಟ್ರೀಯ ಕಾಂಗ್ರೆಸ್ ಮಹಿಳಾ ಘಟಕದ ಕಾರ್ಯದರ್ಶಿ ಶ್ರೀದೇವಿ ಆರ್. ನಾಯಕ ಆರೋಪಿಸಿದರು. ಸೆ.9 ಮತ್ತು 10ರಂದು ಸತೀಶ ಜಾರಕಿಹೊಳಿ, ಅವರ ಕುಟುಂಬ ಸದಸ್ಯರು ಹಾಗೂ ಆಪ್ತರಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಇಡಿ ಶೋಧ ನಡೆಸಿದ್ದು, ವಿದೇಶಿ ಹೂಡಿಕೆ ಹಾಗೂ ಹಣಕಾಸು ವ್ಯವಹಾರಗಳಿಗೆ ಸಂಬಂಧಿಸಿದ ತನಿಖೆಯ ಭಾಗವೆಂದು ವರದಿಯಾಗಿದೆ.

ಸಂವಿಧಾನ ಸಂರಕ್ಷಣಾ ಪಡೆ, ದಲಿತ, ಪ್ರಗತಿಪರ ಹಾಗೂ ಸಮಾನ ಮನಸ್ಕ ಸಂಘಟನೆಗಳ ನೇತೃತ್ವದಲ್ಲಿ ಸತೀಶ ಜಾರಕಿಹೊಳಿ ಅವರ ಮೇಲಿನ ಇಡಿ ಕ್ರಮವನ್ನು ಖಂಡಿಸಿ ಪಟ್ಟಣದ ಸಾರ್ವಜನಿಕ ಕ್ಲಬ್ ಆವರಣದಿಂದ ಮಿನಿ ವಿಧಾನಸೌಧದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ತಹಶೀಲ್ದಾರ್ ಮೂಲಕ ಮನವಿ ಸಲ್ಲಿಸಲಾಯಿತು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಶ್ರೀದೇವಿ ಆರ್. ನಾಯಕ, ಕೇಂದ್ರ ಸರ್ಕಾರವು ತನಿಖಾ ಸಂಸ್ಥೆಗಳನ್ನು ರಾಜಕೀಯ ವಿರೋಧಿಗಳ ವಿರುದ್ಧ ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದರು. ಸತೀಶ ಜಾರಕಿಹೊಳಿ ಅವರನ್ನು ಗುರಿಯಾಗಿಸಿಕೊಂಡು ಈ ಕ್ರಮ ಕೈಗೊಳ್ಳಲಾಗಿದೆ ಎಂದು ದೂರಿದ ಅವರು, 2028ರ ರಾಜ್ಯ ರಾಜಕೀಯವನ್ನು ಗಮನದಲ್ಲಿಟ್ಟುಕೊಂಡು ಈ ದಾಳಿ ನಡೆಸಲಾಗಿದೆ ಎಂಬುದು ತಮ್ಮ ಅಭಿಪ್ರಾಯ ಎಂದು ಹೇಳಿದರು. ಇಡಿ ಶೋಧವನ್ನು ರಾಜಕೀಯ ಪ್ರೇರಿತವೆಂದು ಕಾಂಗ್ರೆಸ್ ನಾಯಕರು ಆರೋಪಿಸಿದ್ದರೆ, ಇಡಿ ತನಿಖೆಯು ಹಣಕಾಸು ಮತ್ತು ವಿದೇಶಿ ವಿನಿಮಯ ನಿಯಮಗಳಿಗೆ ಸಂಬಂಧಿಸಿದ ಆರೋಪಗಳ ಪರಿಶೀಲನೆಯ ಭಾಗವಾಗಿದೆ ಎಂದು ವರದಿಯಾಗಿದೆ.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಮಾತನಾಡಿದ ಅವರು, ಅರ್ಹ ಮತದಾರರ ಹೆಸರು ಪಟ್ಟಿಯಿಂದ ಕೈಬಿಡುವ ಪರಿಸ್ಥಿತಿ ನಿರ್ಮಾಣವಾಗಬಾರದು ಹಾಗೂ ಚುನಾವಣಾ ಆಯೋಗ ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕು ಎಂದು ಒತ್ತಾಯಿಸಿದರು. ಪಶ್ಚಿಮ ಬಂಗಾಳದ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸುಮಾರು 27.16 ಲಕ್ಷ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದ್ದು, ಅವರಲ್ಲಿ 22 ಲಕ್ಷಕ್ಕೂ ಹೆಚ್ಚು ಮಂದಿ ಮರುಸೇರ್ಪಡೆಗಾಗಿ ಮೇಲ್ಮನವಿ ಸಲ್ಲಿಸಿರುವುದಾಗಿ ಚುನಾವಣಾ ಆಯೋಗ ಸುಪ್ರೀಂ ಕೋರ್ಟ್‌ಗೆ ಮಾಹಿತಿ ನೀಡಿದೆ. ಆಯೋಗವು ತನ್ನ ಪ್ರಕ್ರಿಯೆಯನ್ನು ಸಮರ್ಥಿಸಿಕೊಂಡಿದ್ದು, ಅರ್ಹ ಮತದಾರರನ್ನು ಹೊರಗಿಡುವುದು ಉದ್ದೇಶವಲ್ಲ ಎಂದು ಹೇಳಿದೆ.

ಕೇಂದ್ರ ಸರ್ಕಾರವು ಜನರ ಸಮಸ್ಯೆಗಳಿಗೆ ಆದ್ಯತೆ ನೀಡಬೇಕು. ತನಿಖಾ ಸಂಸ್ಥೆಗಳು ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು ಹಾಗೂ ರಾಜಕೀಯ ಕಾರಣಗಳಿಗಾಗಿ ಅವುಗಳನ್ನು ಬಳಸಿಕೊಳ್ಳಬಾರದು ಎಂದು ಶ್ರೀದೇವಿ ಆರ್. ನಾಯಕ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರಂಗಪ್ಪ ಗೋಸಲ್, ವಿಶ್ವನಾಥ್ ಬಲ್ಲಿದವ್, ಮೋಹನ್ ಬಲ್ಲಿದವ್, ಹನುಮಂತ್ರಾಯ ದೊರೆ, ಲಕ್ಷ್ಮಣಜ್ಯೋತಿ, ಶಿವರಾಜ ಗೆಜ್ಜೆಭಾವಿ, ಮಾನಶಯ್ಯ ನಾಯಕ, ಶರಣಗೌಡ ಗೌರಂಪೇಟೆ, ಮಮತಾ ಪ್ರಭು ದೊರೆ ನಾಗೋಲಿ, ಗಂಗಪ್ಪಯ್ಯ ಪೂಜಾರಿ, ಶಿವರಾಜ ಪೂಜಾರಿ ಅರಕೇರಾ, ವೇಣುಗೋಪಾಲ ನಾಯಕ, ತಿಮ್ಮಣ್ಣ ನಾಯಕ್, ದಿವಾನ್ ಹನುಮಂತ ಮನ್ನಾಪೂರಿ, ಪಿಡ್ಡಪ್ಪ ನಾಯಕ, ರಾಚಣ್ಣ ಕೋಳೋರು, ರಂಗನಾಥ ಕೊಂಬಿನ್, ಮಲ್ಲಿಕಾರ್ಜುನ ಬೊಮ್ಮನಾಳ, ಬಾಬು ಕವಾಸ, ಕರ್ಣ ಮರದಕಲ್, ಮಾನಪ್ಪ ಕಾವಲಿ, ತಿಮ್ಮಣ್ಣ ಬುಂಕಲದೊಡ್ಡಿ, ಚನ್ನಬಸವ ನಾಯಕ ಮ್ಯಾಕಲದೊಡ್ಡಿ, ಲಿಂಗಣ್ಣ ನಾಯಕ, ಅಭಿಷೇಕ್ ಚಿಂಚೋಡಿ, ಕುಮಾರ್ ರಾಠೋಡ್, ಗೋಪಾಲ್ ನಾಯಕ, ಬೂದಯ್ಯ ನಾಯಕ ಗಲಗ, ದುರುಗಪ್ಪ ಚಿಂಚೋಡಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

# ಕೃಷಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇಂಜಿನಿಯರ್ಸ್ ದಿನ ಆಚರಣೆ




ರಾಯಚೂರು ಸೆ. 29 (ಕರ್ನಾಟಕ ವಾರ್ತೆ): ಕರ್ನಾಟಕದಲ್ಲಿ ಜನಿಸಿದ ಹೆಸರಾಂತ ಇಂಜಿನಿಯರ್ ಸರ್ ಎಂ.ವಿಶ್ವೇಶ್ವರಯ್ಯನವರ ತಂತ್ರಾಶಗಳು ಮತ್ತು ಅಮೇರಿಕಾದಲ್ಲಿ ಜನಿಸಿದ ಹೆಸರಾಂತ ಕೃಷಿ ವಿಜ್ಞಾನಿ ಪ್ರೊಫೆಸರ್ ಮೇಸನ್ ವಾಗ್ ಅವರ ಕೃಷಿ ಆಧಾರಿತ ಆಶಯಗಳೊಂದಿಗೆ ಈ ಮಹಾವಿದ್ಯಾಲಯ ನಡೆಯುತ್ತಿರುವುದು ತುಂಬಾ ಮೆಚ್ಚುಗೆಯಾದಂತ ಮತ್ತು ಸ್ಮರಿಸುವಂತಹ ವಿಷಯವಾಗಿದೆ ಎಂದು ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ ರಾಯಚೂರಿನ ನಿರ್ದೇಶಕರಾದ ಡಾ. ಹರೀಶ್ ಕುಮಾರ್ ಸರ್ದಾನ ಅವರು ಹೇಳಿದರು.

ಸೆಪ್ಟಂಬರ್ 29ರ ಮಂಗಳವಾರ ದಂದು ನಗರದ ಕೃಷಿ ತಾಂತ್ರಿಕ ಮಹಾವಿದ್ಯಾಲಯ ರಾಯಚೂರು ಆಯೋಜಿಸಿದ ಇಂಜಿನಿಯರ್ಸ್ ದಿನ-2026ರ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಅವರು ಮಾತನಾಡಿದರು.

ಇಂದಿನ ಕಾಲದ ವಿದ್ಯಾರ್ಥಿಗಳಿಗೆ ಕೇವಲ ತಾಂತ್ರಿಕತೆ ಮಾತ್ರವಲ್ಲ. ಅದರ ಹಿಂದಿನ ವಿಜ್ಞಾನವನ್ನು ಕೂಡ ತಿಳಿದುಕೊಳ್ಳಬೇಕು. ಅವಾಗ ಮಾತ್ರ ಪ್ರತಿಯೊಂದು ಸಮಸ್ಯೆಗೆ ಉತ್ತರವನ್ನು ತಂತ್ರಜ್ಞಾನ ರೂಪದಲ್ಲಿ ಹೊರ ತರಲು ಸಾಧ್ಯವಾಗುತ್ತದೆ. ಮುಂದಿನ ದಿನಗಳಲ್ಲಿ ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ ರಾಯಚೂರು ಕೃಷಿ ತಾಂತ್ರಿಕ ಮಹಾವಿದ್ಯಾಲಯ ರಾಯಚೂರಿನ ಸಹಯೋಗದಲ್ಲಿ ಕೃಷಿಯಲ್ಲಿ ತಂತ್ರಜ್ಞಾನಗಳ ಬಳಕೆಯ ಬಗ್ಗೆ ಕಾರ್ಯ ಚಟುವಟಿಕೆಗಳನ್ನು ಮಾಡಲು ಇಚ್ಛಿಸುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಗಳಾಗಿ ಭಾಗವಹಿಸಿದ ಇಂಜಿನಿಯರ್ ವಿದ್ಯಾಸಾಗರ್ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಸಮಯದಲ್ಲಿಯೇ ಜೀವನಕ್ಕೆ ಬೇಕಾಗುವ ಒಂದು ನಿರ್ದಿಷ್ಟ ಗುರಿಯನ್ನು ಇಟ್ಟುಕೊಂಡು ಆ ಗುರಿಯನ್ನು ತಲುಪುವ ನಿಟ್ಟಿನಲ್ಲಿ ವಿದ್ಯಾಭ್ಯಾಸ ಮಾಡಬೇಕು. ಹಾಗೂ ಕೃಷಿ ಇಂಜಿನಿಯರಿಗ್ ವಿಭಾಗದಲ್ಲಿ ನಿಮ್ಮ ವಿಶೇಷತೆಯನ್ನು ಗುರುತಿಸಿಕೊಳ್ಳುವ ನಿಟ್ಟಿನಲ್ಲಿ ಅಭ್ಯಾಸ ಮಾಡಬೇಕೆಂದು ಹೇಳಿದರು. ಕಾಲೇಜಿನ ಹಳೆ ವಿದ್ಯಾರ್ಥಿಯಾದ ಇಂಜಿನಿಯರ್ ಧರೆಪ್ಪ ಸಿದ್ದಾಪುರ ಮುಧೋಳ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಪ್ರೈವೇಟ್ ಸಂಸ್ಥೆಗಳಲ್ಲಿ ಕೆಲಸ ಮಾಡುವುದಕ್ಕಿಂತ ನಮ್ಮ ಸ್ವಂತ ಭೂಮಿಯಲ್ಲಿ ಕೃಷಿಯನ್ನು ಮಾಡಿ ನಾವೇ ಉದ್ಯಮಿಯಾಗಿ ಬೆಳೆಯಬೇಕು. ಅಲ್ಲದೆ ತಮ್ಮ ಜೀವನದ ಅನುಭವಗಳನ್ನು ಹೇಳಿ ವಿದ್ಯಾರ್ಥಿಗಳಿಗೆ ಕೃಷಿ ಮಾಡುವ ಬಯಕೆಯನ್ನು ಹೆಚ್ಚಿಸುವ ರೀತಿಯಲ್ಲಿ ಮಾತನಾಡಿದರು.

ವಿಶೇಷ ಅತಿಥಿಗಳಾದ ಇಂಜಿನಿಯರ್ ಅಶ್ವಿನಿ ಐನಾಪುರ ಅವರು ಮಾತನಾಡಿ, ಮಹಿಳಾ ಅಭ್ಯರ್ಥಿಗಳಿಗೆ ಟ್ರ್ಯಾಕ್ಟರ್ ಸಂಸ್ಥೆಗಳಲ್ಲಿ ಕೆಲಸ ಮಾಡುವುದು ತುಂಬಾ ಕಷ್ಟದಾಯಕವಾಗಿರುತ್ತದೆ. ಆದರೆ ಕೆಲಸ ಮಾಡುವ ಛಲದ ಮನೋಭಾವನೆಯನ್ನು ಹೊಂದಿದರೆ ಸಮಾಜದಲ್ಲಿ ಇರುವ ಯಾವುದೇ ಕಟ್ಟಲೆಗಳು ನಮಗೆ ಅಡ್ಡಿಯಾಗುವುದಿಲ್ಲ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷಿ ತಾಂತ್ರಿಕ ಮಹಾವಿದ್ಯಾಲಯದ ಡೀನ್ ಡಾ. ಕೆ.ವಿ. ಪ್ರಕಾಶ್ ಅವರು ವಹಿಸಿ ಮಾತನಾಡಿ, ಬೇರೆ ಬೇರೆ ವಿಭಾಗಗಳ ಇಂಜಿನಿಯರಿಗ್ ಗಳಿಗಿಂತ ಕೃಷಿ ತಾಂತ್ರಿಕ ವಿಭಾಗವು ಅತ್ಯಂತ ಉನ್ನತ ಸ್ಥಾನವನ್ನು ಪಡೆಯುತ್ತದೆ ಯಾಕೆಂದರೆ ಇದು ದೇಶಕ್ಕೆ ಅನ್ನ ನೀಡುವ ಘನತೆಯ ಜವಾಬ್ದಾರಿಯನ್ನು ಹೊತ್ತುಕೊಂಡಿದೆ. ಆದುದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯು ಕೃಷಿ ಇಂಜಿನಿಯರಿಗ್ ತಂತ್ರಾಶಗಳನ್ನು ಮೈಗೂಡಿಸಿಕೊಂಡು ವಿದ್ಯಾಭ್ಯಾಸ ಮಾಡಿ ಉತ್ತಮ ಕೃಷಿ ಇಂಜಿನಿಯರ್ ಗಳಾಗಿ ಹೊರಬೇಕೆಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯ ರಾಯಚೂರಿನ ಆಸ್ತಿ ಅಧಿಕಾರಿಗಳಾದ ರವಿ ಮೇಸಾ, ಕೃಷಿ ತಾಂತ್ರಿಕ ಮಹಾವಿದ್ಯಾಲಯದ ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳು, ಶಿಕ್ಷಕ, ಶಿಕ್ಷಕಿಯೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಇದ್ದರು.

ವಿದ್ಯಾರ್ಥಿ ನಿರ್ಮಿತ ಅವರು ಕಾರ್ಯಕ್ರಮವನ್ನು ನಿರೂಪಿಸಿದರು. ಆಹಾರ ಮತ್ತು ತಂತ್ರಜ್ಞಾನ ವಿಭಾಗದ ಮುಖ್ಯಸ್ಥರಾದ ಡಾ. ಉದಯ್ ಕುಮಾರ್ ನಿಡೋನಿ ಅವರು ಸ್ವಾಗತಿಸಿದರು. ಪ್ರಾಧ್ಯಾಪಕರಾದ ಡಾ. ಪಿ.ಎಫ್. ಮಠದ ಅವರು ವಂದಿಸಿದರು.

# ಕಲಬುರಗಿಯಲ್ಲಿ ಸಿದ್ದರಾಮಯ್ಯ ಪ್ರತಿಮೆ ಮರುಸ್ಥಾಪನೆಗೆ ಆಗ್ರಹ



ರಾಯಚೂರು, ಸೆ.29: ಕಲಬುರಗಿಯಲ್ಲಿ ತೆರವು ಮಾಡಲಾಗಿರುವ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ಅದೇ ಸ್ಥಳದಲ್ಲಿ ಮರುಸ್ಥಾಪಿಸಲು ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಕುರುಬ ಸಮಾಜದ ಮುಖಂಡ ಕುರಿ ಅಂಜನಪ್ಪ ಒತ್ತಾಯಿಸಿದರು.

ನಗರದ ಪ್ರೆಸ್‌ಕ್ಲಬ್‌ನಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ಪ್ರತಿಮೆ ತೆರವು ಕ್ರಮವನ್ನು ವಿರೋಧಿಸಿ ಕಲಬುರಗಿಯಲ್ಲಿ ನಡೆಯುತ್ತಿರುವ ಹೋರಾಟಕ್ಕೆ ತಮ್ಮ ಬೆಂಬಲವಿದೆ. ಈ ವಿಚಾರವನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ವಿಳಂಬ ಮಾಡದೆ ಪ್ರತಿಮೆಯನ್ನು ಪುನಃ ಪ್ರತಿಷ್ಠಾಪಿಸಬೇಕು ಎಂದು ಆಗ್ರಹಿಸಿದರು.

ಸಿದ್ದರಾಮಯ್ಯ ಅವರು ಎರಡು ಬಾರಿ ರಾಜ್ಯದ ಮುಖ್ಯಮಂತ್ರಿಯಾಗಿ ಕಾರ್ಯನಿರ್ವಹಿಸಿದ್ದು, ತಮ್ಮ ಆಡಳಿತಾವಧಿಯಲ್ಲಿ ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದಾರೆ. ಅವರ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ ಕಲಬುರಗಿ ನಗರದ ವೃತ್ತವೊಂದರಲ್ಲಿ ಪ್ರತಿಮೆ ಸ್ಥಾಪಿಸಲಾಗಿತ್ತು. ಆದರೆ, ಮಹಾನಗರ ಪಾಲಿಕೆ ಅಧಿಕಾರಿಗಳು ಏಕಾಏಕಿ ಪ್ರತಿಮೆಯನ್ನು ತೆರವುಗೊಳಿಸಿರುವುದು ಕುರುಬ ಸಮಾಜದ ಭಾವನೆಗಳಿಗೆ ಧಕ್ಕೆ ತಂದಿದೆ ಎಂದು ಅಂಜನಪ್ಪ ಆರೋಪಿಸಿದರು.

ರಾಯಚೂರು ನಗರದಲ್ಲಿಯೂ ಸಿದ್ದರಾಮಯ್ಯ ಅವರ ಪ್ರತಿಮೆ ಸ್ಥಾಪಿಸುವ ಕುರಿತು ಈಗಾಗಲೇ ಮಹಾನಗರ ಪಾಲಿಕೆಗೆ ಮನವಿ ಸಲ್ಲಿಸಲಾಗಿದೆ. ನಗರದ ಉದ್ಯಾನವನ ಅಥವಾ ಸೂಕ್ತ ಸಾರ್ವಜನಿಕ ಸ್ಥಳವನ್ನು ಗುರುತಿಸಿ, ಮುಂದಿನ ದಿನಗಳಲ್ಲಿ ಪ್ರತಿಮೆ ಪ್ರತಿಷ್ಠಾಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

# ಸಾನ್ವಿ ಶಿಕ್ಷಣ ಸಂಸ್ಥೆಯ ನಾಲ್ವರಿಗೆ ತಾಲೂಕು ಮಟ್ಟದ ಉತ್ತಮ ಶಿಕ್ಷಕಉಪನ್ಯಾಸಕ ಪ್ರಶಸ್ತಿ



ಲಿಂಗಸಗೂರು: ತಾಲೂಕಿನ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಆಯೋಜಿಸಿದ್ದ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯನ್ನು ಗುರುತಿಸಿ ಸಾನ್ವಿ ಶಿಕ್ಷಣ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ನಾಲ್ವರು ಶಿಕ್ಷಕ ಉಪನ್ಯಾಸಕರನ್ನು ಉತ್ತಮ ಶಿಕ್ಷಕ ಹಾಗೂ ಉತ್ತಮ ಉಪನ್ಯಾಸಕ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಸಾನ್ವಿ ಶಿಕ್ಷಣ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಸುಧಾಮೂರ್ತಿ ಇನ್ಫೋ ಮಹಿಳಾ ಪದವಿ ಕಾಲೇಜಿನ ಅರ್ಥಶಾಸ್ತ್ರ ಉಪನ್ಯಾಸಕ ಮಾರುತಿ ರಾಂಪುರ್ ಅವರು ತಾಲೂಕು ಮಟ್ಟದ ಉತ್ತಮ ಉಪನ್ಯಾಸಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿಗಳಿಗೆ ವಿಷಯವನ್ನು ಸರಳವಾಗಿ ಮನವರಿಕೆ ಮಾಡಿಕೊಡುವುದರ ಜೊತೆಗೆ ಅವರ ಶೈಕ್ಷಣಿಕ ಪ್ರಗತಿಗೆ ನಿರಂತರವಾಗಿ ಮಾರ್ಗದರ್ಶನ ನೀಡುತ್ತಿರುವ ಸೇವೆಯನ್ನು ಗುರುತಿಸಿ ಈ ಗೌರವ ನೀಡಲಾಗಿದೆ.

ಡಾ. ಸುಧಾಮೂರ್ತಿ ಇನ್ಫೋ ಪದವಿ ಪೂರ್ವ ಕಾಲೇಜಿನ ಹಿರಿಯ ಕನ್ನಡ ಉಪನ್ಯಾಸಕ ಕೃಷ್ಣಪ್ಪ ಅವರು ಉತ್ತಮ ಉಪನ್ಯಾಸಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಕನ್ನಡ ಭಾಷೆ ಮತ್ತು ಸಾಹಿತ್ಯದ ಬಗೆಗಿನ ಜ್ಞಾನ, ಬೋಧನಾ ಅನುಭವ ಹಾಗೂ ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆ ಮತ್ತು ಸಾಹಿತ್ಯದ ಬಗ್ಗೆ ಆಸಕ್ತಿ ಮೂಡಿಸುವ ನಿಟ್ಟಿನಲ್ಲಿ ಸಲ್ಲಿಸುತ್ತಿರುವ ಸೇವೆಯನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಬೃಂದಾವನ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್‌ನ ಶಿಕ್ಷಕಿ ತಬಸುಮ್ ಅವರು ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಯೊಂದಿಗೆ ವ್ಯಕ್ತಿತ್ವ ವಿಕಸನಕ್ಕೂ ಆದ್ಯತೆ ನೀಡಿ, ಪ್ರೀತಿ ಮತ್ತು ಕಾಳಜಿಯಿಂದ ಬೋಧನೆ ಮಾಡುತ್ತಿರುವ ಅವರ ಸೇವೆಯನ್ನು ಗುರುತಿಸಲಾಗಿದೆ.

ಇದೇ ಸಂಸ್ಥೆಯ ಶ್ರೀ ಗೋವಿಂದ ಕಾರಜೋಳ ಇಂಟರ್‌ನ್ಯಾಷನಲ್ ಶಾಲೆಯ ಶಿಕ್ಷಕಿ ಅಯ್ಯಮ್ಮ ಅವರನ್ನೂ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಮಕ್ಕಳ ಶಿಕ್ಷಣದ ಜೊತೆಗೆ ಅವರಲ್ಲಿನ ಪ್ರತಿಭೆ, ಶಿಸ್ತು, ಸಂಸ್ಕಾರ ಹಾಗೂ ಸೃಜನಶೀಲತೆಯನ್ನು ಬೆಳೆಸುವಲ್ಲಿ ಅವರು ವಹಿಸುತ್ತಿರುವ ಪಾತ್ರವನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ.

ಒಂದೇ ಶಿಕ್ಷಣ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ನಾಲ್ವರು ಶಿಕ್ಷಕ ಉಪನ್ಯಾಸಕರು ತಾಲೂಕು ಮಟ್ಟದ ಪ್ರಶಸ್ತಿಗೆ ಆಯ್ಕೆಯಾಗಿರುವುದಕ್ಕೆ ಸಾನ್ವಿ ಶಿಕ್ಷಣ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಆಡಳಿತ ಮಂಡಳಿ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಸಂತಸ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

# ಪರಿಸರಸ್ನೇಹಿ ಸ್ಯಾನಿಟರಿ ಪ್ಯಾಡ್ ಬಳಕೆ ಕುರಿತು ವಿದ್ಯಾರ್ಥಿನಿಯರಿಗೆ ಜಾಗೃತಿ



ರಾಯಚೂರು: ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಸೆ.29ರಂದು ಗರ್ಭಕಂಠದ ಕ್ಯಾನ್ಸರ್ ಕುರಿತು ಅರಿವು, ಮಹಿಳಾ ಆರೋಗ್ಯ ಹಾಗೂ ಪ್ಲಾಸ್ಟಿಕ್ ಮುಕ್ತ ಪರಿಸರದ ಮಹತ್ವ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿನಿಯರಿಗೆ ಪರಿಸರಸ್ನೇಹಿ ಸ್ಯಾನಿಟರಿ ಪ್ಯಾಡ್‌ಗಳನ್ನು ಉಚಿತವಾಗಿ ವಿತರಿಸಿ, ಅವುಗಳ ಬಳಕೆ ಕುರಿತು ಮಾಹಿತಿ ನೀಡಲಾಯಿತು. ಕಾಲೇಜಿಗೆ ಸ್ಯಾನಿಟರಿ ಪ್ಯಾಡ್ ವೆಂಡಿಂಗ್ ಮಷೀನ್ ಕೂಡ ಉಚಿತವಾಗಿ ನೀಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ್ ಮಾತನಾಡಿ, ಋತುಚಕ್ರವು ಹೆಣ್ಣುಮಕ್ಕಳ ದೇಹದಲ್ಲಿ ನಡೆಯುವ ಸಹಜ ಪ್ರಕ್ರಿಯೆಯಾಗಿದ್ದು, ಅದರ ಕುರಿತು ಯಾವುದೇ ಹಿಂಜರಿಕೆ ಅಥವಾ ಸಂಕೋಚ ಹೊಂದಬಾರದು. ಋತುಚಕ್ರದ ಸಮಯದಲ್ಲಿ ಆರೋಗ್ಯ ಮತ್ತು ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಪರಿಸರಸ್ನೇಹಿ ಸ್ಯಾನಿಟರಿ ಪ್ಯಾಡ್‌ಗಳ ಬಳಕೆಗೆ ಆದ್ಯತೆ ನೀಡಬೇಕು. ಮಹಿಳೆಯರು ತಮ್ಮ ಆರೋಗ್ಯದ ಜೊತೆಗೆ ಪರಿಸರ ಸಂರಕ್ಷಣೆಯ ಬಗ್ಗೆಯೂ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮಹಿಳಾ ಆರೋಗ್ಯ ಜಾಗೃತಿದಾರ ಚನ್ನಪ್ಪ ಪಾಟೀಲ್ ಅವರು ಗರ್ಭಕಂಠದ ಕ್ಯಾನ್ಸರ್ ಕುರಿತು ವಿದ್ಯಾರ್ಥಿನಿಯರಿಗೆ ಮಾಹಿತಿ ನೀಡಿದರು. ಮಹಿಳಾ ಆರೋಗ್ಯದ ಬಗ್ಗೆ ಅರಿವು ಹೊಂದುವುದು, ಸೂಕ್ತ ಸಮಯದಲ್ಲಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಹಾಗೂ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವುದು ಮುಖ್ಯ ಎಂದು ತಿಳಿಸಿದರು. ಇದೇ ವೇಳೆ ಕಾಲೇಜಿಗೆ ಉಚಿತವಾಗಿ ನೀಡಲಾದ ಸ್ಯಾನಿಟರಿ ಪ್ಯಾಡ್ ವೆಂಡಿಂಗ್ ಮಷೀನ್ ಬಳಕೆಯ ವಿಧಾನವನ್ನೂ ವಿದ್ಯಾರ್ಥಿನಿಯರಿಗೆ ವಿವರಿಸಿದರು.

ಕಾರ್ಯಕ್ರಮದ ಸಂಘಟಕರಾದ ಇಕೋ ಕ್ಲಬ್ ಮತ್ತು ರೇಂಜರ್ಸ್ ಘಟಕದ ಸಂಚಾಲಕಿ ಸರಸ್ವತಿ ಕೆ. ಹಾಗೂ ಸ್ಟುಡೆಂಟ್ ವೆಲ್ಫೇರ್ ಸೆಲ್ ಸಂಚಾಲಕಿ ಡಾ. ಸ್ವರೂಪ ಎಂ. ಅವರು ಗರ್ಭಕಂಠದ ಕ್ಯಾನ್ಸರ್, ಎಚ್‌ಪಿವಿ ಸೋಂಕಿನ ಕುರಿತು ಅರಿವು ಹಾಗೂ ಮಹಿಳೆಯರು ಕೈಗೊಳ್ಳಬೇಕಾದ ಆರೋಗ್ಯ ಮುನ್ನೆಚ್ಚರಿಕೆಗಳ ಕುರಿತು ಮಾಹಿತಿ ನೀಡಿದರು.

ವಿದ್ಯಾರ್ಥಿನಿಯರು ತಾವು ಪಡೆದ ಮಾಹಿತಿಯನ್ನು ತಮ್ಮ ಕುಟುಂಬ ಹಾಗೂ ಗ್ರಾಮಗಳಲ್ಲಿನ ಮಹಿಳೆಯರಿಗೂ ತಲುಪಿಸಬೇಕು. ಮಹಿಳಾ ಆರೋಗ್ಯದ ಕುರಿತು ಹೆಚ್ಚಿನ ಅರಿವು ಮೂಡಿದಾಗ ಮಾತ್ರ ಇಂತಹ ಜಾಗೃತಿ ಕಾರ್ಯಕ್ರಮಗಳ ಉದ್ದೇಶ ಸಾರ್ಥಕವಾಗುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K